ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803

ಅಂತರ್ಜಾಲ: https://kptcl.karnataka.gov.in
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್): ಯು40109ಕೆಎ1999ಎಸ್‌ಜಿಸಿ025521**
**ಕಂಪನಿ ಅಧಿಕೃತ ಕಛೇರಿ:** ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.

**ಓದಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013 ದಿನಾಂಕ:07.06.2013.
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013 ದಿನಾಂಕ:14.06.2013.
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014 ದಿನಾಂಕ:06.02.2014.
4. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 17 ಸೇನೌವ 2015 ದಿನಾಂಕ:27.04.2015.
5. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 63 ಸೇನೌವ 2015 ದಿನಾಂಕ:01.10.2015.
6. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 25 ಸೇನೌವ 2015 ದಿನಾಂಕ:14.10.2015.
7. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇನೌವ 2017 ದಿನಾಂಕ:27.03.2017.
8. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 04 ಸೇನೌವ 2018 ದಿನಾಂಕ:27.01.2018.
9. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 18 ಸೇನೌವ 2018 ದಿನಾಂಕ:07.11.2018.
10. ಸರ್ಕಾರದ ಸೇರ್ಪಡೆ ಸಂಖ್ಯೆ: ಸಿಆಸುಇ 18 ಸೇನೌವ 2018 ದಿನಾಂಕ:11.12.2018.
11. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 51 ಸೇನೌವ 2017 ದಿನಾಂಕ:31.05.2019.
12. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಸೇನೌವ 2022 ದಿನಾಂಕ: 30.04.2022.
13. ನಿಗಮ ಕಾರ್ಯಾಲಯದ ಟಿಪ್ಪಣಿ ದಿನಾಂಕ; 07.05.2022.

## ನಿಗಮ ಆದೇಶ ಸಂಖ್ಯೆ:ಕವಿಪ್ರನಿನಿ/ಬಿ5ಎ/ಎಸ್‌ಎ3/5474/97-98/II

**ಬೆಂಗಳೂರು, ದಿನಾಂಕ: 12.05.2022.**

2022-23 ನೇ ಸಾಲಿನಲ್ಲಿ ಅಧಿಕಾರಿ ಮತ್ತು ನೌಕರರ ಸಾರ್ವತ್ರಿಕ ವರ್ಗಾವಣೆಗಳ ಪ್ರಕ್ರಿಯೆಗಳನ್ನು ಜಾರಿಗೊಳಿಸಲು ಸೂಚಿಸಿರುವ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಸೇನೌವ 2022 ದಿನಾಂಕ: 30.04.2022 ನ್ನು ನಿಗಮವು ಅಳವಡಿಸಿಕೊಂಡಿದೆ.

ಮೇಲೆ ತಿಳಿಸಿದ ಕ್ರಮ ಸಂಖ್ಯೆ (1) ರಿಂದ ಕ್ರಮ ಸಂಖ್ಯೆ (12) ರಲ್ಲಿನ ಸರ್ಕಾರದ ಆದೇಶಗಳ/ಸುತ್ತೋಲೆಗಳ/ಸೇರ್ಪಡೆಗಳ ಪ್ರತಿಗಳನ್ನು ಈ ಆದೇಶದೊಂದಿಗೆ ಸೂಕ್ತ ಕ್ರಮಕ್ಕಾಗಿ ಲಗತ್ತಿಸಿದೆ.

ಆದೇಶದ ಮೇರೆಗೆ,

**ನಿರ್ದೇಶಕರು(ಆಡಳಿತ ಮತ್ತು ಮಾ.ಸಂ.)**
**ಕವಿಪ್ರನಿನಿ.**

ಪ್ರತಿಗಳು ಮಾಹಿತಿಗಾಗಿ:
1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂ/ಪಿಸಿಕೆಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂ.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ / ಎಸ್ಕಾಂ.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ / ಎಸ್ಕಾಂ.
5. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/(ಹಣಕಾಸು)/(ಆ. ಮತ್ತು ಮಾ.ಸಂ.) ಕವಿಪ್ರನಿನಿ, ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ https://kptcl.karnataka.gov.in ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

6. ಎಲ್ಲಾ ಅಧೀಕ್ಷಕ ಇಂಜಿನಿಯರ್ / ನಿಯಂತ್ರಣಾಧಿಕಾರಿ, ಕವಿಪ್ರನಿನಿ/ ಎಸ್ಕಾಂ.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ / ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ/ಎಸ್ಕಾಂ.
8. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು/ಎಲ್ಲಾ ಲೆಕ್ಕಾಧಿಕಾರಿಗಳು(ಆಂ.ಪ.), ಕವಿಪ್ರನಿನಿ, ಎಸ್ಕಾಂ.
9. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

ಪ್ರತಿಗಳು ಮಾಹಿತಿಗಾಗಿ:

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ ಮತ್ತು ನಿರ್ದೇಶಕರು, ಕವಿಪ್ರನಿನಿ/ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕ.ವಿ.ಪ್ರ.ನಿ.ನಿ./ಎಸ್ಕಾಂ ಪ.ಜಾ. /ಪ. ಪಂ.ಅಧಿಕಾರಿಗಳ ಸಂಘ, ಬೆಂಗಳೂರು.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2022-23ನೇ ಸಾಲಿನಲ್ಲಿ ಮಾಡುವ ಸರ್ಕಾರಿ ನೌಕರರ ಸಾರ್ವತ್ರಿಕ ವರ್ಗಾವಣೆ ಮಾರ್ಗಸೂಚಿಗಳ ಕುರಿತು.

ಓದಲಾಗಿದೆ:-

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ದಿನಾಂಕ: 07.06.2013.

ಪ್ರಸ್ತಾವನೆ:-

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಸರ್ಕಾರಿ ನೌಕರರ ವರ್ಗಾವಣೆ ಕುರಿತಂತೆ ವಿಸ್ತೃತವಾದ ಮಾರ್ಗಸೂಚಿಗಳನ್ನು ನೀಡಲಾಗಿದೆ. ಈ ಮಾರ್ಗಸೂಚಿಗಳ ಪ್ರಕಾರ ಸರ್ಕಾರಿ ನೌಕರರ ವರ್ಗಾವಣೆಗಳನ್ನು ಪ್ರತಿ ವರ್ಷ ಮೇ ಮತ್ತು ಜೂನ್ ತಿಂಗಳುಗಳಲ್ಲಿ ಮಾತ್ರ ಸದರಿ ಮಾರ್ಗಸೂಚಿಗಳಲ್ಲಿರುವ ಷರತ್ತುಗಳಿಗೊಳಪಟ್ಟು ಮಾಡಬಹುದಾಗಿದೆ.

2022-23ನೇ ಸಾಲಿಗೆ ಗ್ರೂಪ್-ಎ, ಗ್ರೂಪ್-ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ವರ್ಗದ ಅಧಿಕಾರಿ/ನೌಕರರಿಗೆ ಅನ್ವಯವಾಗುವಂತೆ ಒಂದು ಜೇಷ್ಠತಾ ಘಟಕದಲ್ಲಿ ಕಾರ್ಯನಿರತ ವೃಂದ ಬಲದ ಶೇಕಡಾ 6ನ್ನು ಮೀರದಂತೆ ಸಾರ್ವತ್ರಿಕ ವರ್ಗಾವಣೆ ಕೈಗೊಳ್ಳಲು ಆಯಾ ಇಲಾಖಾ ಸಚಿವರಿಗೆ ಅಧಿಕಾರ ಪ್ರತ್ಯಾಯೋಜಿಸಲು ನಿರ್ಧರಿಸಿರುವುದರಿಂದ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 16 ಸೇನೌವ 2022**
**ಬೆಂಗಳೂರು, ದಿನಾಂಕ: 30.04.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ ನಮೂದಿಸಿರುವ ಷರತ್ತುಗಳಿಗೊಳಪಟ್ಟು, 2022-23ನೇ ಸಾಲಿಗೆ ಗ್ರೂಪ್-ಎ, ಗ್ರೂಪ್-ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ವರ್ಗದ ಅಧಿಕಾರಿ/ನೌಕರರಿಗೆ ಅನ್ವಯವಾಗುವಂತೆ ಒಂದು ಜೇಷ್ಠತಾ ಘಟಕದಲ್ಲಿ ಕಾರ್ಯನಿರತ ವೃಂದ ಬಲದ ಶೇಕಡ 6ನ್ನು ಮೀರದಂತೆ ದಿನಾಂಕ: 01.05.2022 ರಿಂದ ದಿನಾಂಕ: 15.06.2022 ರವರೆಗೆ ಸಾರ್ವತ್ರಿಕ ವರ್ಗಾವಣೆ ಕೈಗೊಳ್ಳಲು ಆಯಾ ಇಲಾಖಾ ಸಚಿವರಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Thejavathi 30/04/2022
(ತೇಜಾವತಿ. ಎನ್.)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು - ವಿಶೇಷ ಕೋಶ)

ಇವರಿಗೆ

ಸಂಕಲನಕಾರರು, ಕರ್ನಾಟಕ ಇ-ರಾಜ್ಯಪತ್ರ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)/(ಇ&ಆರ್ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು.
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
15. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
17. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ- 110021.
18. ಎಲ್ಲಾ ಸಚಿವರ/ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು.
19. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
20. ಸಚಿವಾಲಯದ ಎಲ್ಲಾ ಶಾಖೆಗಳು
21. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಪಾರ್ಕ್, ಬೆಂಗಳೂರು.
22. ವಾರದ ರಾಜ್ಯಪತ್ರ.
23. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(* ಪ್ರತ್ಯೇಕ ಮುಖಪತ್ರದೊಂದಿಗೆ)

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ



| | | |
|---|---|---|
| ಭಾಗ - I<br>Part - I | ಬೆಂಗಳೂರು, ಸೋಮವಾರ, ಜೂನ್ ೧೦, ೨೦೧೩ (ಜ್ಯೇಷ್ಠ ೨೦, ಶಕ ವರ್ಷ ೧೯೩೫)<br>Bangalore, Monday, June 10, 2013 (Jyeishta 20, Shaka Varsha 1935) | ನಂ. ೮೨೪<br>No. 824 |



## ಕರ್ನಾಟಕ ಸರ್ಕಾರದ ನಡವಳಿಗಳು

### ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ವಿಷಯ : ಸರ್ಕಾರಿ ನೌಕರರ ವರ್ಗಾವಣೆಗಳ ಬಗ್ಗೆ ಮಾರ್ಗಸೂಚಿಗಳು

ಓದಲಾಗಿದೆ : ಸರ್ಕಾರಿ ಆದೇಶ ಸಂಖ್ಯೆ: ಡಿಪಿಎಆರ್ 4 ಎಸ್‌ಟಿಆರ್ 2001, ದಿನಾಂಕ 22-11-2001.

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ 22.11.2001ರ ಸರ್ಕಾರದ ಆದೇಶದಲ್ಲಿ ಸರ್ಕಾರಿ ನೌಕರರ ವರ್ಗಾವಣೆ ಕುರಿತಂತೆ ಶ್ರೀ ಹಾರನಹಳ್ಳಿ ರಾಮಸ್ವಾಮಿ ಅಧ್ಯಕ್ಷತೆಯಲ್ಲಿದ್ದ ಆಡಳಿತ ಸುಧಾರಣಾ ಆಯೋಗದ ಶಿಫಾರಸ್ಸುಗಳನ್ವಯ ವಿಸ್ತೃತ ಮಾರ್ಗಸೂಚಿಗಳನ್ನು ನೀಡಲಾಗಿದೆ.

ತದನಂತರ, ಮೇಲೆ ಓದಲಾದ ಆದೇಶದಲ್ಲಿನ ಸೂಚನೆಗಳನ್ವಯ ಪ್ರತಿ ವರ್ಷ ಮಾಡಬೇಕಾದ ವರ್ಗಾವಣೆಗಳ ಬಗ್ಗೆ ನಿರ್ದಿಷ್ಟವಾದ ಸೂಚನೆಗಳನ್ನು ನೀಡಲಾಗುತ್ತಿದೆ.

ಪ್ರಸ್ತುತ ಸರ್ಕಾರಿ ನೌಕರರನ್ನು ಒಂದೇ ಸ್ಥಳದಲ್ಲಿ ಸಾಧ್ಯವಾದಷ್ಟು ಮಟ್ಟಿಗೆ ಒಂದು ನಿರ್ದಿಷ್ಟ ಅವಧಿಗೆ ಮುಂದುವರಿಸುವುದರಿಂದ ಅವರು ಇಲಾಖಾ ಚಟುವಟಿಕೆಗಳ ಬಗ್ಗೆ ವಾಸ್ತವಿಕವಾಗಿ ಸಮಂಜಸವಾದ ಜ್ಞಾನ ಪಡೆದು ಇಲಾಖೆಯು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಿ ಉದ್ದೇಶಿತ ಫಲಿತಾಂಶಗಳನ್ನು ಪೂರೈಸುವುದು ಸಾಧ್ಯವಾಗಲು ಅನುವಾಗುವುದರಿಂದ ಸರ್ಕಾರಿ ನೌಕರರ ವರ್ಗಾವಣೆಗಳನ್ನು ನಿಯಂತ್ರಿಸುವುದು ಅವಶ್ಯಕವೆಂದು ಕಂಡು ಬಂದಿದೆ. ಇದಲ್ಲದೇ, ಕರ್ನಾಟಕ ಆಡಳಿತ ಸುಧಾರಣಾ ಆಯೋಗದ ಶಿಫಾರಸ್ಸಿನನ್ವಯ ಆಡಳಿತದಲ್ಲಿ ಹೆಚ್ಚಿನ ಹೊಣೆಗಾರಿಕೆ ಮತ್ತು ಪಾರದರ್ಶಕತೆಯನ್ನು ತರುವುದು ಅವಶ್ಯವಾಗಿದೆ. ಮುಂದುವರಿದು, ಸರ್ಕಾರಿ ನೌಕರರನ್ನು ಇಡೀ ರಾಜ್ಯದ ವ್ಯಾಪ್ತಿಯಲ್ಲಿ ಏಕರೂಪವಾಗಿ ಮತ್ತು ಸಮನಾಗಿ ಹಂಚಿಕೆ ಮಾಡಿ ನೇಮಿಸಿ ಸರ್ಕಾರವು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಸರ್ಕಾರಿ ನೌಕರರ ವರ್ಗಾವಣೆಗಳನ್ನು ನಿಯಂತ್ರಿಸುವ ಬಗ್ಗೆ ಹೊಸ ಮಾರ್ಗಸೂಚಿಗಳನ್ನು ಹೊರಡಿಸುವುದು ಅವಶ್ಯವೆಂದು ಮನಗಾಣಲಾಗಿದೆ.

### ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ಬೆಂಗಳೂರು, ದಿನಾಂಕ 07/06/2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಗಾಗಿ ಹಾಗೂ ಮೇಲೆ ಓದಲಾದ ದಿನಾಂಕ 22.11.2001ರ ಆದೇಶವನ್ನು ರದ್ದುಪಡಿಸಿ, ಸರ್ಕಾರಿ ನೌಕರರ ವರ್ಗಾವಣೆ / ನಿಯೋಜನೆಗಳನ್ನು ನಿಯಂತ್ರಿಸುವ ಬಗ್ಗೆ ಈ ಆದೇಶದಲ್ಲಿ ಸೂಚಿಸಿರುವಂತೆ ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಲು ಸರ್ಕಾರವು ಇಚ್ಛೆಸುತ್ತದೆ. ಈ ಮಾರ್ಗಸೂಚಿಗಳು 2013-14ನೇ ಸಾಲಿನಿಂದ ಜಾರಿಗೆ ಬರುತ್ತವೆ. ವರ್ಗಾವಣೆ ಉದ್ದೇಶಕ್ಕಾಗಿ ಈಗಾಗಲೇ ಹೊರಡಿಸಲಾಗಿರುವ ಪ್ರತ್ಯೇಕ ಅಧಿನಿಯಮ / ನಿಯಮಗಳು ಅನ್ವಯವಾಗುವ ಸರ್ಕಾರಿ ನೌಕರರಿಗೆ ಈ ಮಾರ್ಗಸೂಚಿಗಳು ಅನ್ವಯವಾಗುವುದಿಲ್ಲ.

2. ನಿಯತಕಾಲಿಕ ವರ್ಗಾವಣೆಗಳು :-

ಸಾರ್ವತ್ರಿಕ ವರ್ಗಾವಣೆಗಳನ್ನು ಪ್ರತಿ ವರ್ಷ ಮೇ ಜೂನ್ ತಿಂಗಳುಗಳಲ್ಲಿ ಮಾಡತಕ್ಕದ್ದು. ಈ ಆದೇಶದಲ್ಲಿ ನಿಗದಿಪಡಿಸಿರುವ ಸಂದರ್ಭ ಹಾಗೂ ವಿಧಾನವನ್ನು ಹೊರತುಪಡಿಸಿ ಯಾವುದೇ ಸರ್ಕಾರಿ ನೌಕರರನ್ನು

ವರ್ಗಾವಣೆ / ನಿಯೋಜನೆಗೆ ಪರಿಗಣಿಸತಕ್ಕದ್ದಲ್ಲ. 2013-14ನೇ ಸಾಲಿನ ಸಾಮಾನ್ಯ ವರ್ಗಾವಣೆಗಳನ್ನು 30ನೇ ಜೂನ್ 2013ರೊಳಗೆ ಮಾಡತಕ್ಕದ್ದು.

3. ವಿವರಣೆ :- ಈ ಆದೇಶದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸದ ಹೊರತು,-

(ಅ) 'ಸಕ್ಷಮ ಪ್ರಾಧಿಕಾರ' ಎಂದರೆ ನೇಮಕಾತಿ ಪ್ರಾಧಿಕಾರ ಅಥವಾ ವರ್ಗಾವಣೆ/ನಿಯೋಜನೆ ಮಾಡಲು ಅಧಿಕಾರ ಹೊಂದಿರುವ ಪ್ರಾಧಿಕಾರ;

(ಆ) 'ನಿಯೋಜನೆ' ಎಂದರೆ ಒಂದು ಇಲಾಖೆಯ ಹುದ್ದೆಯಿಂದ ಇನ್ನೊಂದು ಇಲಾಖೆಯ ಸಮಾನಾಂತರ ಹುದ್ದೆಗೆ ವರ್ಗಾವಣೆ ಹಾಗೂ ಇದು ಕ್ರಮವಾಗಿ ಸಂವರ್ಗೀಕೃತ (encadre) ಹುದ್ದೆಗಳಿಗೆ / ಸಂವರ್ಗೀಕೃತವಲ್ಲದ (excadre) ಹುದ್ದೆಗಳಿಗೆ / ಸ್ಥಳೀಯ ಸಂಸ್ಥೆಗಳಿಗೆ / ಸಹಕಾರ ಸಂಘಗಳಿಗೆ / ಅನ್ಯ ಸೇವೆಗಳಲ್ಲಿನ ಹುದ್ದೆಗಳಿಗೆ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರನ್ವಯ / ಕರ್ನಾಟಕ ನಾಗರೀಕ ಸೇವಾ ನಿಯಮಗಳನ್ವಯ / ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಕ್ರಮವಾಗಿ ಸರ್ಕಾರಿ ನೌಕರರನ್ನು ಮಾಡುವ ನಿಯೋಜನೆಗಳನ್ನೂ ಒಳಗೊಂಡಿರುತ್ತದೆ;

(ಇ) 'ಗುಂಪು-ಎ', 'ಬಿ', 'ಸಿ' ಮತ್ತು 'ಡಿ' ವೃಂದದ ಹುದ್ದೆಗಳು ಎಂದರೆ ಕರ್ನಾಟಕ ನಾಗರೀಕ ಸೇವೆ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 5ರಡಿ ವರ್ಗೀಕರಿಸಲಾಗಿರುವ ಗುಂಪು-ಎ, ಬಿ, ಸಿ ಮತ್ತು ಡಿ ವೃಂದದ ಸರ್ಕಾರಿ ಹುದ್ದೆಗಳು;

(ಈ) 'ವರ್ಗಾವಣೆ' ಎಂದರೆ ಒಬ್ಬ ಸರ್ಕಾರಿ ನೌಕರನನ್ನು ಇನ್ನೊಂದು ಹೊಸ ಹುದ್ದೆಯ ಕರ್ತವ್ಯಗಳನ್ನು ನಿರ್ವಹಿಸಲು ಒಂದು ಕೇಂದ್ರ ಸ್ಥಾನದಿಂದ ಮತ್ತೊಂದು ಕೇಂದ್ರ ಸ್ಥಾನಕ್ಕೆ ಅಥವಾ ಒಂದೇ ಕೇಂದ್ರ ಸ್ಥಾನದಲ್ಲಿರುವ ಒಂದು ಕಛೇರಿಯಿಂದ ಇನ್ನೊಂದು ಕಛೇರಿಗೆ ಅಥವಾ ಕೇಂದ್ರ ಸ್ಥಾನವನ್ನೇ ಬದಲಾಯಿಸಿ ಮಾಡುವ ನೇಮಕಾತಿ;

ಟಿಪ್ಪಣಿ:- ಪ್ರಧಾನ ಕಛೇರಿಯಲ್ಲಿ ಒಬ್ಬ ಸರ್ಕಾರಿ ನೌಕರನನ್ನು ಒಂದೇ ಕಛೇರಿಯ / ಘಟಕದ ಒಂದು ಹುದ್ದೆಯಿಂದ ಇನ್ನೊಂದು ಹುದ್ದೆಗೆ ಅಥವಾ ಮೇಜಿಗೆ / ವಿಷಯ ಬದಲಾಯಿಸಿ ಚಲನವಲನ ಮಾಡಿದಲ್ಲಿ ಇದನ್ನು ವರ್ಗಾವಣೆ ಎಂದು ಪರಿಗಣಿಸಲು ಬರುವುದಿಲ್ಲ;

(ಉ) 'ಜೇಷ್ಠತಾ ಘಟಕ' ಎಂದರೆ ಒಂದು ಹುದ್ದೆಗೆ ಸಂಬಂಧಿಸಿದಂತೆ ಕ್ರಮವಾಗಿ ಅಧಿಕಾರ ಹೊಂದಿರುವ ನೇಮಕಾತಿ ಪ್ರಾಧಿಕಾರದ ವ್ಯಾಪ್ತಿ;

4. ವರ್ಗಾವಣಾ ಪ್ರಕ್ರಿಯೆ :-

ಅ. ವರ್ಗಾವಣೆ / ನಿಯೋಜನೆಗಳನ್ನು ಸಕ್ಷಮ ಪ್ರಾಧಿಕಾರವು ಈ ಆದೇಶದಲ್ಲಿ ನಮೂದಿಸಿರುವ ಷರತ್ತುಗಳಿಗೊಳಪಟ್ಟು ಮುಖ್ಯವಾಗಿ ಸಾರ್ವಜನಿಕ ಹಿತದೃಷ್ಟಿಯಲ್ಲಿ ಪಾರದರ್ಶಕವಾಗಿ ಮಾಡಬೇಕು. ಕೋರಿಕೆಯ ಮೇರೆಗೆ ಮಾಡುವ ವರ್ಗಾವಣೆಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಕೌನ್ಸೆಲ್ಲಿಂಗ್ ಮೂಲಕ ಹಾಗೂ ಒಬ್ಬ ಸರ್ಕಾರಿ ನೌಕರನು ಒಂದು ನಿರ್ದಿಷ್ಟ ಹುದ್ದೆಯಲ್ಲಿ ಸಲ್ಲಿಸಿರುವ ಸೇವಾವಧಿಯನ್ನು ಹಾಗೂ ಈ ಆದೇಶದಲ್ಲಿ ಉಲ್ಲೇಖಿಸಿರುವ ಪ್ರಕರಣಗಳಲ್ಲಿಯೂ ಮತ್ತು ಅಧಿಕಾರಿಗಳ ಅಂತರ ಆದ್ಯತೆಯನ್ನು ನಿರ್ಧರಿಸಲು ನಿಗದಿಪಡಿಸಿರುವ ಇತರ ಅಂಶಗಳನ್ನು ಪರಿಗಣಿಸಿ ಆದ್ಯತೆಯನ್ನು ನೀಡಬಹುದು. ಸರ್ಕಾರಿ ನೌಕರರ ವಾರ್ಷಿಕ ಕಾರ್ಯನಿರ್ವಹಣಾ ಆಧಾರದ ಮೇಲೆ ಅವರ ಕಾರ್ಯನಿರ್ವಹಣೆಗೂ ಆದ್ಯತೆ ನೀಡಬಹುದು;

ಆ. ಮೇಲೆ ಓದಲಾದ ಆದೇಶದಲ್ಲಿ ಸರ್ಕಾರಿ ನೌಕರರ ವರ್ಗಾವಣೆಗಳನ್ನು ಮಾಡಲು ರಚಿಸಲಾಗಿದ್ದ ವೃಂದ ನಿರ್ವಹಣಾ ಪ್ರಾಧಿಕಾರಗಳನ್ನು ಈ ಮೂಲಕ ರದ್ದುಪಡಿಸಲಾಗಿದೆ. ಇನ್ನು ಮುಂದೆ ವರ್ಗಾವಣೆಗಳನ್ನು ಸಕ್ಷಮ ಪ್ರಾಧಿಕಾರಗಳು ಮಾಡಬಹುದು.

5. ವರ್ಗಾವಣೆಯ ಬಗ್ಗೆ ನಿರ್ಬಂಧಗಳು:-

ಯಾವುದೇ ಒಂದು ವರ್ಷದಲ್ಲಿ ಮಾಡಲಾಗುವ ವರ್ಗಾವಣೆ/ನಿಯೋಜನೆಗಳ ಸಂಖ್ಯೆಯು ಸಾಧ್ಯವಾದಷ್ಟು ಮಟ್ಟಿಗೆ ಕನಿಷ್ಠವಾಗಿರುವಂತೆ ಹಾಗೂ ಸಾಧಾರಣವಾಗಿ ಯಾವುದೇ ವರ್ಷ ಮಾಡಲಾಗುವ ಒಟ್ಟು ವರ್ಗಾವಣೆ/ ನಿಯೋಜನೆಗಳ ಸಂಖ್ಯೆಯು ಒಂದು ಜೇಷ್ಠತಾ ಘಟಕದಲ್ಲಿ ಕಾರ್ಯನಿರತ ವೃಂದ ಬಲದ ಶೇ. 6ನ್ನು ಮೀರದಂತೆ ಸಕ್ಷಮ ಪ್ರಾಧಿಕಾರ ಖಚಿತಪಡಿಸಿಕೊಳ್ಳತಕ್ಕದ್ದು. ಆದರೆ ವರ್ಗಾವಣೆ/ನಿಯೋಜನೆಗಳನ್ನು ಮಾಡುವಾಗ ಯಾವುದೇ ಸರ್ಕಾರಿ ನೌಕರನು ಕಡ್ಡಾಯ ನಿರೀಕ್ಷಣೆಯಲ್ಲಿ ಉಳಿಯುವಂತಹ ಸಂದರ್ಭಗಳು ಉಂಟಾಗದಂತೆ ನೋಡಿಕೊಳ್ಳತಕ್ಕದ್ದು.

6. ಸಕ್ಷಮ ಪ್ರಾಧಿಕಾರದ ಜವಾಬ್ದಾರಿಗಳು:-

ಸಕ್ಷಮ ಪ್ರಾಧಿಕಾರವು ವರ್ಗಾವಣೆ / ನಿಯೋಜನೆ ಅಥವಾ ನೇಮಕಾತಿ ಮಾಡುವಾಗ ಈ ಕೆಳಗಿನ ಅಂಶಗಳನ್ನು ಸಹ ಖಚಿತಪಡಿಸಿಕೊಳ್ಳತಕ್ಕದ್ದು:-

(ಅ) ಯಾವುದೇ ಸರ್ಕಾರಿ ನೌಕರನ ವಿರುದ್ಧ ಗಂಭೀರ ಆರೋಪಗಳಿದ್ದಲ್ಲಿ ಹಾಗೂ ಆತನ ವಿರುದ್ಧ ಇಲಾಖಾ ವಿಚಾರಣೆ / ಕ್ರಿಮಿನಲ್ ನಡವಳಿ ಪ್ರಾರಂಭಿಸಲಾಗಿದ್ದಲ್ಲಿ ಅಥವಾ ಬಾಕಿಯಿದ್ದಲ್ಲಿ ಅಥವಾ ಆತನನ್ನು ಅಭಿಯೋಜನೆಗೊಳ್ಳಿಸಲು ಉದ್ದೇಶಿಸಲಾಗಿದ್ದಲ್ಲಿ ಅಂತಹವರಿಗೆ ಸೂಕ್ಷ್ಮ ಹುದ್ದೆಗಳಿಗೆ / ಕಾರ್ಯಕಾರಿ ಹುದ್ದೆಗಳಿಗೆ ನೇಮಿಸದೇ ಅವರು ತಮ್ಮ ವಿರುದ್ಧ ಬಾಕಿಯಿರುವ ತನಿಖೆಯಲ್ಲಿ ಹಸ್ತಕ್ಷೇಪ ಮಾಡಲು ಅವಕಾಶವಿಲ್ಲದಿರುವಂತಹ ಕಾರ್ಯಕಾರಿಯೇತರ (non-executive) ಹುದ್ದೆಗಳಿಗೆ. ನೇಮಿಸತಕ್ಕದ್ದು. ಮುಂದುವರೆದು, ಇಲಾಖಾ ವಿಚಾರಣೆ / ಕ್ರಿಮಿನಲ್ ಮೊಕದ್ದಮೆ ಬಾಕಿಯಿರುವ ಸರ್ಕಾರಿ ನೌಕರನನ್ನು ಅವನು ಕೋರುವ ಹುದ್ದೆಗೆ ನಿಯೋಜಿಸಬಾರದು.

(ಆ) ಯಾವುದೇ ಒಂದು ಹುದ್ದೆಗೆ ಒಂದು ಸಂದರ್ಭದಲ್ಲಿ ಮಾಡುವ ನಿಯೋಜನೆಯ ಗರಿಷ್ಠ ಅವಧಿಯು 5 ವರ್ಷ;

i. ಹಿಂದಿನ ನಿಯೋಜನೆಯ ನಂತರ ಮಾತೃ ಇಲಾಖೆಯಲ್ಲಿ 2 ವರ್ಷಗಳ ಬಾಹುಮಾನ್ಯತಾವಧಿ (ಕೂಲಿಂಗ್ ಆಫ್ ಪೀರಿಯಡ್) ಮುಗಿಸದ ಸರ್ಕಾರಿ ನೌಕರರನ್ನು ಹಿಂದಿನ ನಿಯೋಜನೆಯಲ್ಲಿ 5 ವರ್ಷ ಕಳೆಯದಿದ್ದರೂ ನಿಯೋಜಿಸಲು ಪರಿಗಣಿಸಬಾರದು. ಒಬ್ಬ ಸರ್ಕಾರಿ ನೌಕರನನ್ನು ಒಂದೇ ಹುದ್ದೆಗೆ ಪದೇ ಪದೇ ನಿಯೋಜಿಸುವುದನ್ನು ನಿಷೇಧಿಸಲಾಗಿದೆ;

ii. ಇಲಾಖೆಯಲ್ಲಿನ ಒಂದು ಹುದ್ದೆಯನ್ನು ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ತುಂಬಲು ಆ ಇಲಾಖೆಯಲ್ಲಿ ಸೂಕ್ತವಾದ ಅಧಿಕಾರಿಗಳು ಲಭ್ಯವಿಲ್ಲದಿದ್ದ ಸಂದರ್ಭವನ್ನು ಹೊರತುಪಡಿಸಿ ಬೇರೆ ಸಂದರ್ಭಗಳಲ್ಲಿ ಆ ಹುದ್ದೆಗೆ ಇನ್ನೊಂದು ಇಲಾಖೆಯ ಸರ್ಕಾರಿ ನೌಕರರನ್ನು ನಿಯೋಜಿಸುವಂತಿಲ್ಲ. ಈ ರೀತಿಯ ನಿಯೋಜನೆಗಳನ್ನು ಮಾಡಿದ್ದಲ್ಲಿ ಪ್ರತಿ ವರ್ಷ ಅವುಗಳನ್ನು ಪುನರ್‌ಪರಿಶೀಲಿಸಿ ಆ ಹುದ್ದೆಯನ್ನು ತುಂಬಲು ಸೂಕ್ತ ಇಲಾಖಾಧಿಕಾರಿಗಳು ಲಭ್ಯರಾದಲ್ಲಿ ನಿಯೋಜಿತ ಅಧಿಕಾರಿಯನ್ನು ಮಾತೃ ಇಲಾಖೆಗೆ ಹಿಂದಿರುಗಿಸತಕ್ಕದ್ದು;

7. ಈ ಕೆಳಕಂಡ ಸಂದರ್ಭಗಳನ್ನು ಹೊರತುಪಡಿಸಿ ಸಕ್ಷಮ ಪ್ರಾಧಿಕಾರಗಳು ವರ್ಗಾವಣೆಗಳನ್ನು ಜೂನ್ ತಿಂಗಳ ನಂತರ ಮಾಡತಕ್ಕದ್ದಲ್ಲ:—

(ಅ) ಒಬ್ಬ ಸರ್ಕಾರಿ ನೌಕರನನ್ನು ಸೇವೆಯಿಂದ ಅಮಾನತ್ತಿನಲ್ಲಿಡುವ ಬದಲು ವರ್ಗಾಯಿಸಲು/ನಿಯೋಜಿಸಲು ಉದ್ದೇಶಿಸಿದಾಗ;

(ಆ) ಹೊಸ ಕಛೇರಿ / ಹುದ್ದೆಗಳನ್ನು ಸೃಜಿಸಿದಾಗ ಅಥವಾ ನಿವೃತ್ತಿ, ಬಡ್ತಿ, ರಾಜೀನಾಮೆ, ಹಿಂಬಡ್ತಿ, ವಜಾಗೊಳಿಸುವುದರಿಂದ, ಮರಣದಿಂದ, ಕಡ್ಡಾಯ ನಿವೃತ್ತಿಯ ಕಾರಣದಿಂದ ಹುದ್ದೆಗಳು ತೆರವಾದಾಗ ಅಥವಾ ನೇರ ನೇಮಕಾತಿ ಹೊಂದಿದವರನ್ನು ಮೊದಲು ನೇಮಿಸುವಾಗ ಅಥವಾ ಬಡ್ತಿ ಹೊಂದಿದವರನ್ನು ನೇಮಿಸುವಾಗ ಅಥವಾ ಯಾವುದೇ ಅನಿರೀಕ್ಷಿತ ಪರಿಸ್ಥಿತಿಯಿಂದ ಉದ್ಭವವಾದ ಹುದ್ದೆಗಳನ್ನು ತಕ್ಷಣ ತುಂಬಬೇಕಾದಾಗ;

(ಇ) ವಿಶೇಷವಾದ ಅಥವಾ ಅಪವಾದಾತ್ಮಕ ಕಾರಣಗಳ ಮೇರೆಗೆ ಮಾಡುವ ವಾರ್ಷಿಕ ವರ್ಗಾವಣೆಗಳ ಸಂಖ್ಯೆಯನ್ನು ಕನಿಷ್ಠ ಮಟ್ಟಕ್ಕೆ ಸೀಮಿತಗೊಳಿಸಿ ನಿರ್ದಿಷ್ಟ ಪ್ರಕರಣಗಳಲ್ಲಿ ವರ್ಗಾವಣೆಯು ಅವಶ್ಯವೆನಿಸಿದಲ್ಲಿ ಇದಕ್ಕೆ ಕಾರಣಗಳನ್ನು ಲಿಖಿತ ಮೂಲಕ ದಾಖಲಿಸಿ ವರ್ಗಾವಣೆ ಮಾಡಬೇಕಾದಾಗ. ಇಂತಹ ಪ್ರಕರಣಗಳನ್ನು ಬಾಕೂ ತಪ್ಪದೇ ಮುಖ್ಯಮಂತ್ರಿಗಳಿಗೆ ಸಲ್ಲಿಸತಕ್ಕದ್ದು ಮತ್ತು ಮುಖ್ಯಮಂತ್ರಿಗಳ ಅನುಮೋದನೆ ಪಡೆದು ವರ್ಗಾವಣೆ ಮಾಡತಕ್ಕದ್ದು.

(ಈ) ಪರಸ್ಪರ ವರ್ಗಾವಣೆ / ನಿಯೋಜನೆ ಸೌಲಭ್ಯವನ್ನು ಸರ್ಕಾರಿ ನೌಕರನ ಸೇವಾವಧಿಯಲ್ಲಿ ಒಂದು ಬಾರಿ ಮಾತ್ರ ನೀಡಬಹುದು; ಮತ್ತು

(ಉ) ಯಾವುದೇ ಸರ್ಕಾರಿ ನೌಕರನ ವಿರುದ್ಧ ಮೇಲ್ನೋಟಕ್ಕೆ ಗಂಭೀರ ಸ್ವರೂಪದ ದೂರಿರುವ ಪ್ರಕರಣಗಳಲ್ಲಿ ಮೇಲ್ನೋಟಕ್ಕೆ ಆರೋಪವಿದೆಯೆಂಬ ಬಗ್ಗೆ ಇಲಾಖಾ ಮುಖ್ಯಸ್ಥರು ಅಭಿಪ್ರಾಯಪಟ್ಟಲ್ಲಿ ಅಂತಹ ಪ್ರಕರಣಗಳಲ್ಲಿ ಸರ್ಕಾರಿ ನೌಕರನಿಗೆ ದೋಷಾರೋಪಣೆ ಪಟ್ಟಿ / ಚಾರ್ಜ್ ಶೀಟ್ ಜಾರಿಯಾಗಿರುವುದು ಅಥವಾ ಸಕ್ಷಮ ನ್ಯಾಯಾಲಯದಲ್ಲಿ ಅಧಿಕಾರಿಯನ್ನು ಅಭಿಯೋಜಿಸುವ ಬಗ್ಗೆ ಅನುಮತಿ ನೀಡಿರುವುದು ಖಚಿತವಾದ ಪ್ರಕರಣಗಳಲ್ಲಿ.

8. ಒಂದು ಸ್ಥಳದಲ್ಲಿರಬಹುದಾದ ಕನಿಷ್ಠ ಅವಧಿ:—

ಒಂದು ಸ್ಥಳದಲ್ಲಿ ಒಂದು ಹುದ್ದೆಯಲ್ಲಿ ಈ ಕೆಳಗೆ ಸೂಚಿಸಿರುವ ಸೇವಾವಧಿಯನ್ನು ಪೂರ್ಣಗೊಳಿಸದ ಯಾವುದೇ ಸರ್ಕಾರಿ ನೌಕರನನ್ನು ಸಾಧಾರಣವಾಗಿ ವರ್ಗಾವಣೆ/ನಿಯೋಜನೆ ಮಾಡುವಂತಿಲ್ಲ :—

| ಕ್ರ.ಸಂ | ವೃಂದ | ಸೇವಾವಧಿ (ವರ್ಷಗಳು) |
|---|---|---|
| 1 | 2 | 3 |
| 1 | ಎಲ್ಲ ಗುಂಪು-ಎ ಹುದ್ದೆಗಳು | 3ವರ್ಷ |
| 2 | ಎಲ್ಲ ಗುಂಪು-ಬಿ ಹುದ್ದೆಗಳು | |
| 3 | ಎಲ್ಲ ಗುಂಪು-ಸಿ ಹುದ್ದೆಗಳು | 4 ವರ್ಷ |
| 4 | ಎಲ್ಲ ಗುಂಪು-ಡಿ ಹುದ್ದೆಗಳು | 7 ವರ್ಷ |

ತಮ್ಮ ಇಲಾಖೆಯ ವ್ಯಾಪ್ತಿಯಡಿ ಬರುವ ಇಲಾಖೆಗಳ ಒಂದು ನಿರ್ದಿಷ್ಟವಾದ ಹುದ್ದೆಯ ಕಾರ್ಯ ಸ್ವರೂಪದ / ಸೂಕ್ಷ್ಮತೆಯ ಆಧಾರದ ಮೇಲೆ ಒಂದು ಹುದ್ದೆಯಲ್ಲಿ ಸರ್ಕಾರಿ ನೌಕರನು ಸೇವೆ ಸಲ್ಲಿಸಬಹುದಾದ ಕನಿಷ್ಠ ಅವಧಿಯನ್ನು, ಸಚಿವಾಲಯದ ಆಡಳಿತ ಇಲಾಖೆಗಳು ಮುಖ್ಯಮಂತ್ರಿಯವರ ಪೂರ್ವಾನುಮೋದನೆಯೊಂದಿಗೆ ಕಾಲಕಾಲಕ್ಕೆ ಪರಿಷ್ಕರಿಸಿ/ನಿಗದಿಪಡಿಸಿ ಆದೇಶ ಹೊರಡಿಸಬಹುದು.

9. ಅವಧಿಪೂರ್ವ / ಅವಧಿ ಮೀರಿದ ವರ್ಗಾವಣೆಗಳು :-

ಅ. ಸಾಮಾನ್ಯವಾಗಿ ಅವಧಿಪೂರ್ವ ವರ್ಗಾವಣೆಗಳನ್ನು ಮಾಡತಕ್ಕದ್ದಲ್ಲ. ಈ ಕೆಳಕಂಡ ಸಂದರ್ಭಗಳಲ್ಲಿ ಸಕ್ಷಮ ಪ್ರಾಧಿಕಾರವು ಲಿಖಿತವಾಗಿ ಕಾರಣಗಳನ್ನು ದಾಖಲಿಸಿ ಸರ್ಕಾರಿ ನೌಕರನು ಒಂದು ಸ್ಥಳದಲ್ಲಿರಬಹುದಾದ ಸೇವಾವಧಿಯನ್ನು ವಿಸ್ತರಿಸಬಹುದು ಅಥವಾ ಕಡಿತಗೊಳಿಸಬಹುದು. ಪ್ರಸ್ತುತ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸಲು ಯಾವುದೇ ಸರ್ಕಾರಿ ನೌಕರನು (ಅವನು ಅಥವಾ ಅವಳು) ಸೂಕ್ತವಾಗಿರುವುದಿಲ್ಲವೆಂದು ಸಕ್ಷಮ ಪ್ರಾಧಿಕಾರಿಗೆ ಅನಿಸಿದಲ್ಲಿ, ಕಂಡಿಕೆ 8ರಲ್ಲಿ ತಿಳಿಸಲಾಗಿರುವ ಕನಿಷ್ಠ ಅವಧಿಯನ್ನು ಕಡಿತಗೊಳಿಸಿ ಸಂಬಂಧಿಸಿದ ಸರ್ಕಾರಿ ನೌಕರರನ್ನು ಅವಧಿಪೂರ್ವ ವರ್ಗಾಯಿಸಬಹುದಾಗಿದ್ದು, ಈ ಬಗ್ಗೆ ಕಾರಣಗಳನ್ನು ಲಿಖಿತವಾಗಿ ದಾಖಲಿಸುವುದು.

i. ಒಂದು ಸ್ಥಳದಲ್ಲಿರಬಹುದಾದ ಗರಿಷ್ಠ ಅವಧಿಯನ್ನು ಪೂರ್ಣಗೊಳಿಸಿ ವರ್ಗಾವಣೆಗೆ ಅರ್ಹನಿರುವ ಸರ್ಕಾರಿ ನೌಕರನಿಗೆ ನಿವೃತ್ತನಾಗಲು ಎರಡು ವರ್ಷಕ್ಕಿಂತ ಕಡಿಮೆ ಸೇವಾವಧಿ ಇದ್ದಲ್ಲಿ;

ii. ಒಬ್ಬ ಸರ್ಕಾರಿ ನೌಕರನು ವಿಶೇಷ ತಾಂತ್ರಿಕ ವಿದ್ಯಾರ್ಹತೆ ಅಥವಾ ಅನುಭವ ಹೊಂದಿದ್ದು, ಅಂತಹ ನಿರ್ದಿಷ್ಟವಾದ ಹುದ್ದೆಗೆ ತಕ್ಷಣಕ್ಕೆ ನೇಮಿಸಲು ಸೂಕ್ತವಾದ ಬದಲಿ ನೌಕರರು ಲಭ್ಯವಿಲ್ಲದಿದ್ದಲ್ಲಿ;

iii. ಕೇಂದ್ರ ಸರ್ಕಾರದ ಯೋಜನೆ ಅಥವಾ ಫ್ಲ್ಯಾಗ್‌ಶಿಪ್ ಯೋಜನೆಗಳಲ್ಲಿ ಒಬ್ಬ ಸರ್ಕಾರಿ ನೌಕರನು ಕೆಲಸ ಮಾಡುತ್ತಿದ್ದು ಆ ಯೋಜನೆಯ ಅನುಷ್ಠಾನಗೊಳಿಸುವಿಕೆಯು ಪ್ರಮುಖ ಹಂತದಲ್ಲಿರುವಾಗ ಆತನ ಸೇವೆಯನ್ನು ಹಿಂಪಡೆದಲ್ಲಿ ಸಕಾಲದಲ್ಲಿ ಆ ಯೋಜನೆಯ ಪೂರ್ಣಗೊಳ್ಳುವಿಕೆಯು ಗಂಭೀರವಾಗಿ ನಿಲ್ಲುವ ಸಂಭವವಿದ್ದಲ್ಲಿ;

iv. ಪತಿ-ಪತ್ನಿಯರಿಬ್ಬರೂ ಸರ್ಕಾರಿ ನೌಕರರಾಗಿದ್ದು, ಇವರಲ್ಲಿ ಒಬ್ಬರು ವರ್ಗಾವಣೆಗೊಂಡಲ್ಲಿ, ಆಗ ಇನ್ನೊಬ್ಬರು ಹಾಲಿಯಿರುವ ಸ್ಥಳದಲ್ಲಿ ಕನಿಷ್ಠ ಸೇವಾವಧಿಯನ್ನು ಪೂರೈಸಿರದಿದ್ದರೂ ಖಾಲಿ ಹುದ್ದೆಯ ಲಭ್ಯತೆಗೊಳಪಟ್ಟು ಆ ಸ್ಥಳಕ್ಕೆ ಅಥವಾ ಹತ್ತಿರವಿರುವ ಸ್ಥಳಕ್ಕೆ ವರ್ಗಾಯಿಸಲು;

v. ಮಹಿಳಾ ಸರ್ಕಾರಿ ನೌಕರರು ವಿಧವೆ / ಅವಿವಾಹಿತೆ / ವಿಚ್ಛೇದನ ಪಡೆದ ಅವಿವಾಹಿತೆಯಾದಲ್ಲಿ, ಅವರನ್ನು ವರ್ಗಾಯಿಸಬಹುದು ಹಾಗೂ ಒಂದು ವೇಳೆ ಇವರಿಗೆ ಮೊದಲನೆ ಬಾರಿ ನೇಮಕಾತಿ ಮಾಡಲಾಗುತ್ತಿದ್ದರೆ, ಆಕೆಯನ್ನು ಖಾಲಿ ಹುದ್ದೆಯ ಲಭ್ಯತೆಗೊಳಪಟ್ಟು ಆಕೆಯ ಆಯ್ಕೆಯ ಸ್ಥಳಕ್ಕೆ ನೇಮಕಾತಿ ಮಾಡಬಹುದು;

vi. ಒಂದು ವೇಳೆ ಸರ್ಕಾರಿ ನೌಕರನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಯಾಗಿದ್ದಲ್ಲಿ ಮಾತ್ರ ಅಂತಹ ನೌಕರನನ್ನು ಆ ಪದಾಧಿಕಾರದ ಅವಧಿ ಮುಗಿಯುವವರೆಗೆ ವರ್ಗಾಯಿಸಬಾರದು. ಒಂದು ವೇಳೆ ಪದಾಧಿಕಾರದ ಅವಧಿ ಮುಗಿದ ನಂತರ 3 ತಿಂಗಳಲ್ಲಿ ಚುನಾವಣೆಗಳು ನಡೆಯದಿದ್ದಲ್ಲಿ ಅಂತಹವರನ್ನು ವರ್ಗಾಯಿಸಬಹುದು. ಒಂದು ವೇಳೆ ಅವನು ಮರುಚುನಾಯಿತನಾದಲ್ಲಿ, ಎರಡನೇ ಅವಧಿಯವರೆಗೆ ಮಾತ್ರ ಆತನನ್ನು ಮುಂದುವರಿಸಬಹುದು.

vii. ಸರ್ಕಾರಿ ನೌಕರರು ಅಂಗವಿಕಲರಾಗಿದ್ದಲ್ಲಿ ವೈದ್ಯಕೀಯ ಪ್ರಮಾಣ ಪತ್ರ ಪಡೆಯುವ ಷರತ್ತಿನ ಮೇರೆಗೆ;

viii. ಸರ್ಕಾರಿ ನೌಕರ ಅಥವಾ ಆತನ / ಆಕೆಯ ಅಥವಾ ಮಕ್ಕಳು ಯಾವುದೇ ಗಂಭೀರ ಅಥವಾ ಮಾರಕ ಕಾಯಿಲೆಗಳಿಂದ ಬಳಲುತ್ತಿದ್ದಲ್ಲಿ ಒಂದು ಸ್ಥಳದಲ್ಲಿ ಆ ವೈದ್ಯಕೀಯ ಚಿಕಿತ್ಸಾ ಸೌಲಭ್ಯವು ಲಭ್ಯವಿದ್ದು ಈ ಬಗ್ಗೆ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರ ಪಡೆದಲ್ಲಿ;

ಆ. ಆದರೆ ಯಾವುದೇ ರೀತಿಯ ಅವಧಿಪೂರ್ವ ವರ್ಗಾವಣೆಗಳನ್ನು ಹಾಗೂ ಸಾಮಾನ್ಯ ವರ್ಗಾವಣಾ ಅವಧಿ ಮುಗಿದ ನಂತರ ಯಾವುದೇ ವರ್ಗಾವಣೆಗಳನ್ನು ಮತ್ತು ಮೇಲೆ ತಿಳಿಸಿರುವಂತೆ ಸರ್ಕಾರಿ ನೌಕರರು ಒಂದು ಸ್ಥಳದಲ್ಲಿರಬಹುದಾದ ಅವಧಿ ವಿಸ್ತರಿಸಿ ಮಾಡುವ ವರ್ಗಾವಣೆಗಳನ್ನು ಮಾಡುವ ಮುನ್ನ ಸಚಿವಾಲಯದ ಆಡಳಿತ ಇಲಾಖೆಗಳು ಮಾನ್ಯ ಮುಖ್ಯಮಂತ್ರಿಯವರ ಅನುಮೋದನೆಯನ್ನು ತಪ್ಪದೇ ಪಡೆಯತಕ್ಕದ್ದು; ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರು ಯಾವುದೇ ಪ್ರಸಂಗದಲ್ಲಿ ಮೊದಲು ವರ್ಗಾವಣೆಗಳನ್ನು ಮಾಡಿ ನಂತರ ಮಾನ್ಯ ಮುಖ್ಯಮಂತ್ರಿಯವರ ಸ್ಥಿರೀಕರಣ/ಘಟನೋತ್ತರ ಅನುಮೋದನೆ ಪಡೆಯತಕ್ಕದ್ದಲ್ಲ.

10. **ಖಾಲಿ ಹುದ್ದೆಗಳ ಸಮತೋಲನ :-**

ಈ ಆದೇಶದಲ್ಲಿ ವ್ಯತಿರಿಕ್ತವಾಗಿ ಏನೇ ಒಳಗೊಂಡಿದ್ದರೂ ಯಾವುದೇ ಒಂದು ಜಿಲ್ಲೆಯಲ್ಲಿ ಯಾವುದೇ ಇಲಾಖೆಯ ಯಾವುದೇ ವೃಂದದಲ್ಲಿರುವ ಖಾಲಿ ಹುದ್ದೆಗಳ ಸಂಖ್ಯೆಯು ಅನುಪಾತರಹಿತವಾಗಿ ಹೆಚ್ಚಾಗಿದ್ದಲ್ಲಿ, ಸಕ್ಷಮ ಪ್ರಾಧಿಕಾರಗಳು ಸಾಧ್ಯವಾದಷ್ಟು ಮಟ್ಟಿಗೆ ಖಾಲಿ ಹುದ್ದೆಗಳು ವಿವಿಧ ಜಿಲ್ಲೆಗಳಲ್ಲಿ ಸಮನಾಗಿ ಹಂಚಿಕೆಯಾಗಿರುವಂತೆ ನೋಡಿಕೊಳ್ಳತಕ್ಕದ್ದು;

11. **ವರ್ಗಾವಣೆಗಳ ಮೇಲ್ವಿಚಾರಣೆ :-**

ವರ್ಗಾವಣೆಗಳ ಬಗ್ಗೆ ವರ್ಷ ಪೂರ್ತಿ ಮೇಲ್ವಿಚಾರಣೆ ಮಾಡಲಾಗುವುದು. ಆದ್ದರಿಂದ ಎಲ್ಲ ಸಕ್ಷಮ ಪ್ರಾಧಿಕಾರಗಳು ಮಾಡಲಾಗಿರುವ ವರ್ಗಾವಣೆಗಳ ವಿವರಗಳನ್ನು ಈ ಆದೇಶಕ್ಕೆ ಲಗತ್ತಿಸಿದ ಅನುಬಂಧ-2ರ ನಮೂನೆಯಲ್ಲಿ ಸಾರ್ವತ್ರಿಕ ವರ್ಗಾವಣಾ ಅವಧಿ ಮುಗಿದ ನಂತರ 15 ದಿನಗಳಲ್ಲಿ ಕಳುಹಿಸಬೇಕು. ತದನಂತರ ಪ್ರತಿ 3 ತಿಂಗಳಿಗೊಮ್ಮೆ, ಅಂದರೆ ಸೆಪ್ಟೆಂಬರ್, ಡಿಸೆಂಬರ್ ಹಾಗೂ ಮಾರ್ಚ್ ಅಂತ್ಯಕ್ಕೆ ತದನಂತರದ 15 ದಿನಗಳೊಳಗೆ ಈ ಮಾಹಿತಿಯನ್ನು ಸಲ್ಲಿಸಬೇಕು. ತಮ್ಮ ಇಲಾಖೆಯ ಆಡಳಿತ ವ್ಯಾಪ್ತಿಯೊಳಗೆ ಬರುವ ಎಲ್ಲ ಕ್ಷೇತ್ರ ಇಲಾಖೆಗಳ ಮಾಹಿತಿಯನ್ನು ಕ್ರೋಢೀಕರಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ನಿಯತಕಾಲಿಕವಾಗಿ ಕಳುಹಿಸುವುದು ಸಚಿವಾಲಯದ ಎಲ್ಲ ಆಡಳಿತ ಇಲಾಖೆಗಳ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳ ಜವಾಬ್ದಾರಿಯಾಗುತ್ತದೆ.

12. **ವರ್ಗಾವಣೆಗಳ ಬಗ್ಗೆ ರಾಜಕೀಯ ಒತ್ತಡವನ್ನು ತರುವುದು :-**

ಸರ್ಕಾರಿ ನೌಕರನು ವರ್ಗಾವಣೆಯನ್ನು ಹಕ್ಕೆಂದು ಪ್ರತಿಪಾದಿಸುವಂತಿಲ್ಲ. ವರ್ಗಾವಣೆಗಳ ಬಗ್ಗೆ ರಾಜಕೀಯ ಒತ್ತಡವನ್ನು ತರುವುದನ್ನು ನಿಷೇಧಿಸಲಾಗಿದೆ. ಯಾವುದೇ ಸರ್ಕಾರಿ ನೌಕರನು ತನ್ನನ್ನು ಯಾವುದೇ ನಿರ್ದಿಷ್ಟವಾದ ಹುದ್ದೆಗೆ ವರ್ಗಾಯಿಸುವ ಬಗ್ಗೆ ಸುತ್ತೋಲೆ ಸಂಖ್ಯೆ : ಸಿಆಸುಇ 26 ಸೇನೌವ 93, ದಿನಾಂಕ 22.5.1993, ಅಧಿಕೃತ ಜ್ಞಾಪನ ಸಂಖ್ಯೆ : ಡಿಪಿಎಆರ್ 41 ಎಸ್‌ಟಿಆರ್ 94, ದಿನಾಂಕ 5.8.1994 ಹಾಗೂ ಅಧಿಕೃತ ಜ್ಞಾಪನ ಸಂಖ್ಯೆ : ಸಿಆಸುಇ 54 ಸೇನೌವ 93, ದಿನಾಂಕ 19.12.1994ರ ಸೂಚನೆಗಳನ್ನು ಉಲ್ಲಂಘಿಸಿ ರಾಜಕೀಯ ಒತ್ತಡ ತಂದಲ್ಲಿ ಆತನ ವಿರುದ್ಧ ಮೇಲ್ಕಂಡ ಸುತ್ತೋಲೆಗಳಲ್ಲಿ ಸೂಚಿಸಿರುವಂತೆ ಕ್ರಮ ತೆಗೆದುಕೊಳ್ಳತಕ್ಕದ್ದು. ಅಂತಹ ನೌಕರನನ್ನು ಕೋರಿದ ಸ್ಥಳಕ್ಕೆ ವರ್ಗಾವಣೆಗೊಳ್ಳದಂತೆ ನೋಡಿಕೊಳ್ಳತಕ್ಕದ್ದು.

13. **ಸಕ್ಷಮ ಪ್ರಾಧಿಕಾರದ ತೀರ್ಮಾನಗಳ ಬಗ್ಗೆ ಮೇಲ್ಮನವಿ :-**

ಅ. ಒಬ್ಬ ಸರ್ಕಾರಿ ನೌಕರನು ವರ್ಗಾವಣೆ ಆದೇಶ ಪಡೆದ ಒಂದು ವಾರದೊಳಗೆ ವರ್ಗಾವಣಾ ಆದೇಶದ ಪ್ರತಿಯೊಡನೆ ವರ್ಗಾವಣೆ ಆದೇಶವನ್ನು ಮಾರ್ಪಡಿಸಲು ಕಾರಣಗಳನ್ನು ನಮೂದಿಸಿ ಸಕ್ಷಮ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಬಹುದು;

ಆ. ಸಕ್ಷಮ ಪ್ರಾಧಿಕಾರವು ಪ್ರಕರಣದ ಎಲ್ಲ ಸನ್ನಿವೇಶಗಳನ್ನು ಪರಿಗಣಿಸಿ ಈ ಆದೇಶದ ಸೂಚನೆಗಳನ್ನು ಪಾಲಿಸಿ ಸೂಕ್ತವಾದ ಆದೇಶಗಳನ್ನು ಹೊರಡಿಸಬಹುದು.

14. **ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ವರ್ಗಾವಣೆಗಳು :-**

ಈ ಆದೇಶದಲ್ಲಿ ವ್ಯತಿರಿಕ್ತವಾಗಿ ಏನೇ ಒಳಗೊಂಡಿದ್ದರೂ ಕರ್ನಾಟಕ ಸರ್ಕಾರ ಸಚಿವಾಲಯದ ಸರ್ಕಾರಿ ನೌಕರರ ಚಲನವಲನದ ಬಗ್ಗೆ ಅನುಬಂಧ-1ರಲ್ಲಿ ಸೂಚಿಸಿರುವಂತೆ ನಿಯಂತ್ರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ದೇವರಾಜು
ಸರ್ಕಾರದ ಉಪ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು)

## ಅನುಬಂಧ-1

### ಕರ್ನಾಟಕ ಸರ್ಕಾರ ಸಚಿವಾಲಯದ ಸಿಬ್ಬಂದಿಯ ಚಲನವಲನ

1. ಕರ್ನಾಟಕ ಸರ್ಕಾರ ಸಚಿವಾಲಯವು ಕ್ಷೇತ್ರ ಇಲಾಖೆಗಳಿಗಿಂತ ಭಿನ್ನವಾಗಿದ್ದು, ಕ್ಷೇತ್ರ ಇಲಾಖೆಗಳಂತೆ ಸರ್ಕಾರದ ನೀತಿ ಮತ್ತು ಕಾರ್ಯಕ್ರಮಗಳನ್ನು ಕಾರ್ಯರೂಪಕ್ಕೆ ತರುವುದಕ್ಕೆ ಮಾತ್ರ ಸಂಬಂಧಿಸಿರದೆ, ವಿಭಿನ್ನವಾದ ಪಾತ್ರವನ್ನು ಹೊಂದಿದೆ, ಅಂದರೆ, ಯೋಜನೆಗಳನ್ನು ರೂಪಿಸುವುದು (ಪಂಚವಾರ್ಷಿಕ ಯೋಜನೆಯೂ ಒಳಗೊಂಡಂತೆ) ಕಾರ್ಯನೀತಿ, ತಜ್ಞ/ತಾಂತ್ರಿಕ ಸಲಹೆಯನ್ನು ಕಾನೂನು, ಸಿಬ್ಬಂದಿ, ಆರ್ಥಿಕ ಮತ್ತು ಇತರ ವಿಷಯಗಳಲ್ಲಿ ಒದಗಿಸುವುದು ಹಾಗೂ ಸರ್ಕಾರದ ಭಂಡಾರದಂತೆ ಕಾರ್ಯನಿರ್ವಹಿಸುವುದೂ ಒಳಗೊಂಡಂತೆ ಕೇಂದ್ರ ಸರ್ಕಾರದೊಂದಿಗೆ / ಬಾಹ್ಯ ಏಜೆನ್ಸಿಗಳೊಂದಿಗೆ ವ್ಯವಹರಿಸುವುದು. ಅಲ್ಲದೆ ಕರ್ನಾಟಕ ಸರ್ಕಾರ ಸಚಿವಾಲಯವು ಏಕ ಘಟಕ ಕಛೇರಿ. ಆದುದರಿಂದ, ಕರ್ನಾಟಕ ಸರ್ಕಾರ ಸಚಿವಾಲಯದ ಸಿಬ್ಬಂದಿಗೆ ಸಂಬಂಧಿಸಿದಂತೆ 'ವರ್ಗಾವಣೆ' ಪದಕ್ಕೆ ಬದಲಾಗಿ 'ಚಲನವಲನ' ಪದವನ್ನು ಬಳಸಲಾಗಿದೆ.

2. ಕರ್ನಾಟಕ ಸರ್ಕಾರ ಸಚಿವಾಲಯದ ಸೇವೆಗೆ ಸೇರಿದ ಸಿಬ್ಬಂದಿಯ ಚಲನವಲನದ ಉದ್ದೇಶಕ್ಕಾಗಿ ಕರ್ನಾಟಕ ಸರ್ಕಾರ ಸಚಿವಾಲಯದ ವಿವಿಧ ಇಲಾಖೆಗಳನ್ನು 4 ಪ್ರವರ್ಗಗಳಾಗಿ ವಿಂಗಡಿಸಲಾಗಿದೆ. ಅಂದರೆ ಕೆಳಗೆ ನಿರ್ದಿಷ್ಟಪಡಿಸಿರುವಂತೆ:- ಅಭಿವೃದ್ಧಿ ಇಲಾಖೆಗಳು, ನಿಯಂತ್ರಿಸುವ ಇಲಾಖೆಗಳು, ಸೇವಾ ಇಲಾಖೆಗಳು ಮತ್ತು ತಾಂತ್ರಿಕ / ಪರಿಣಿತ ಇಲಾಖೆಗಳು.

| ಅಭಿವೃದ್ಧಿ ಇಲಾಖೆಗಳು | ನಿಯಂತ್ರಣಾ ಇಲಾಖೆಗಳು | ಸೇವಾನಿರತ ಇಲಾಖೆಗಳು | ತಾಂತ್ರಿಕ / ಪರಿಣಿತ ಇಲಾಖೆಗಳು |
|---|---|---|---|
| 1) ಕೃಷಿ | 1) ಸಹಕಾರ | 1) ಶಿಕ್ಷಣ | 1) ಕಾನೂನು |
| 2) ತೋಟಗಾರಿಕೆ | 2) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಸಿಆಸು ಇಲಾಖೆಯ ಸೇವಾ ನಿಯಮಗಳು ವಿಭಾಗವನ್ನು ಹೊರತುಪಡಿಸಿ) | 2) ಆರೋಗ್ಯ ಮತ್ತು ಕುಟುಂಬ ಕಲ್ಯಾಣ | 2) ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ |
| 3) ಪಶುಸಂಗೋಪನೆ ಮತ್ತು ಮೀನುಗಾರಿಕೆ | 3) ಇಂಧನ | 3) ವಸತಿ | 3) ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ |
| 4) ವಾಣಿಜ್ಯ ಮತ್ತು ಕೈಗಾರಿಕೆ | 4) ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳು | 4) ಪ್ರವಾಸೋದ್ಯಮ | 4) ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ |
| 5) ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲ ಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ | 5) ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ | 5) ಯುವಜನಸೇವಾ | 5) ಸಿಆಸು ಇಲಾಖೆಯ ಸೇವಾ ನಿಯಮಗಳು ವಿಭಾಗ |
| 6) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ | 6) ಒಳಾಡಳಿತ | 6) ಮೂಲಸೌಕರ್ಯ ಅಭಿವೃದ್ಧಿ | 6) ಆರ್ಥಿಕ |
| | 7) ಸಾರಿಗೆ | 7) ಜಲಸಂಪನ್ಮೂಲ | |
| | 8) ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ | 8) ವೈದ್ಯಕೀಯ ಶಿಕ್ಷಣ | |

| | | | |
|---|---|---|---|
| | 9) ಕಾರ್ಮಿಕ | 9) ಸಮಾಜ ಕಲ್ಯಾಣ | |
| | 10) ಕಂದಾಯ | 10) ಸಾರ್ವಜನಿಕ ಉದ್ದಿಮೆಗಳು | |
| | 11) ನಗರಾಭಿವೃದ್ಧಿ | - | |

3. ಕರ್ನಾಟಕ ಸರ್ಕಾರ (ವ್ಯವಹಾರ ಹಂಚಿಕೆ) ನಿಯಮಗಳು, 1977ರನ್ವಯ, ಕರ್ನಾಟಕ ಸರ್ಕಾರ ಸಚಿವಾಲಯದ ಪ್ರತಿ ಇಲಾಖೆಯ ಕಾರ್ಯವನ್ನು ಹಂಚಿಕೆ ಮಾಡಲಾಗಿದೆ. ಪ್ರತಿ ಇಲಾಖೆಯು ತನಗೆ ಹಂಚಿಕೆ ಮಾಡಲಾದಂತೆ ಕೆಲವು ವಿಶಿಷ್ಟ ಚಟುವಟಿಕೆಗಳು, ಅಧಿನಿಯಮಗಳು, ನಿಯಮಗಳು, ವಿನಿಯಮಯಗಳು ಮುಂತಾದವುಗಳ ಬಗ್ಗೆ ವ್ಯವಹರಿಸುತ್ತದೆ. ಕರ್ನಾಟಕ ಸರ್ಕಾರ ಸಚಿವಾಲಯದ ಒಂದು ಇಲಾಖೆಗೆ ಹಂಚಿಕೆ ಮಾಡಲಾದ ನೌಕರ ಸಿಬ್ಬಂದಿಯು ಇಲಾಖೆಗೆ ಸಂಬಂಧಿಸಿದ ಕೆಲಸದ ಪರಿಚಯ ಪಡೆಯಲು ಹಾಗೂ ಪ್ರಾವೀಣ್ಯತೆ ಹೊಂದಲು ಮತ್ತು ತನಗೆ ಹಂಚಿಕೆ ಮಾಡಲಾದ ಕೆಲಸದಲ್ಲಿ ನೈಪುಣ್ಯತೆಯನ್ನು ಪಡೆಯಲು ಸಕಾರಣವಾದ ಕಾಲಾವಕಾಶ ಬೇಕಾಗುತ್ತದೆ.

4. ಮೇಲೆ ತಿಳಿಸಿದ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರ ಸಚಿವಾಲಯದ ಸಿಬ್ಬಂದಿಯ ಚಲನವಲನ ಮತ್ತು ಅವರ ತರಬೇತಿಯನ್ನು ಕೆಳಗೆ ತಿಳಿಸಿದಂತೆ ನಿಯಂತ್ರಿಸಲಾಗುತ್ತದೆ:-

(ಅ) ಒಂದು ಇಲಾಖೆಯಲ್ಲಿ ಕನಿಷ್ಠ ಸೇವಾ ಅವಧಿಯು ಈ ಕೆಳಕಂಡಂತಿದೆ:-

| ಹುದ್ದೆ | ಅಭಿವೃದ್ಧಿ ಇಲಾಖೆಗಳು | | ನಿಯಂತ್ರಣಾ ಇಲಾಖೆಗಳು | | ಸೇವಾ ನಿರತ ಇಲಾಖೆಗಳು | | ತಾಂತ್ರಿಕ/ಪರಿಣಿತ ಇಲಾಖೆಗಳು | |
|---|---|---|---|---|---|---|---|---|
| | ಕನಿಷ್ಠ | ಗರಿಷ್ಠ | ಕನಿಷ್ಠ | ಗರಿಷ್ಠ | ಕನಿಷ್ಠ | ಗರಿಷ್ಠ | ಕನಿಷ್ಠ | ಗರಿಷ್ಠ |
| (1) | (2) | (3) | (4) | (5) | (6) | (7) | (8) | (9) |
| ಅಪರ / ಜಂಟಿ / ಉಪ ಕಾರ್ಯದರ್ಶಿ | 3ವರ್ಷ ಗಳು | 6ವರ್ಷ ಗಳು | 3ವರ್ಷ ಗಳು | 6ವರ್ಷ ಗಳು | 3ವರ್ಷ ಗಳು | 6ವರ್ಷ ಗಳು | 5ವರ್ಷ ಗಳು | ಮಿತಿ ಇಲ್ಲ |
| ಅಧೀನ ಕಾರ್ಯದರ್ಶಿ/ ಶಾಖಾಧಿಕಾರಿಗಳು | 3ವರ್ಷ ಗಳು | 6ವರ್ಷ ಗಳು | 3ವರ್ಷ ಗಳು | 6ವರ್ಷ ಗಳು | 3ವರ್ಷ ಗಳು | 6ವರ್ಷ ಗಳು | 5ವರ್ಷ ಗಳು | ಮಿತಿ ಇಲ್ಲ |
| ಹಿ. ಸಹಾಯಕರು/ ಸಹಾಯಕರು | 5ವರ್ಷ ಗಳು | 7ವರ್ಷ ಗಳು | 5ವರ್ಷ ಗಳು | 7ವರ್ಷ ಗಳು | 5ವರ್ಷ ಗಳು | 7ವರ್ಷ ಗಳು | 6ವರ್ಷ ಗಳು | ಮಿತಿ ಇಲ್ಲ |
| ಕಿ. ಸಹಾಯಕರು/ ಗ್ರೂಪ್-ಡಿ | 5ವರ್ಷ ಗಳು | 7ವರ್ಷ ಗಳು | 5ವರ್ಷ ಗಳು | 7ವರ್ಷ ಗಳು | 5ವರ್ಷ ಗಳು | 7ವರ್ಷ ಗಳು | 6ವರ್ಷ ಗಳು | 7ವರ್ಷ ಗಳು |

ಮೇಲೆ ತಿಳಿಸಿದ ಅವಧಿಯು ಕೆಳಗಿನ ಅಂಶ (ಅ)ರಲ್ಲಿ ತಿಳಿಸಿದ ತರಬೇತಿ ಅವಧಿಯನ್ನು ಹೊರತುಪಡಿಸಲಾಗಿದೆ.

(ಆ) ಸಹಾಯಕರು, ಹಿರಿಯ ಸಹಾಯಕರು, ಶಾಖಾಧಿಕಾರಿಗಳು, ಅಧೀನ ಕಾರ್ಯದರ್ಶಿಗಳ ಹುದ್ದೆಗಳನ್ನು ಹೊಂದಿದ ಕರ್ನಾಟಕ ಸರ್ಕಾರ ಸಚಿವಾಲಯದ ಸೇವೆಗೆ ಸೇರಿದ ಪ್ರತಿ ಸದಸ್ಯರನ್ನು ಕ್ಷೇತ್ರ ಇಲಾಖೆಗೆ 2 ವರ್ಷಗಳ ಅವಧಿಗೆ ಸೇವೆಗೆ ಸೇರಿದ 5 ವರ್ಷದ ಅವಧಿಯೊಳಗೆ ನಿಯೋಜಿಸತಕ್ಕದ್ದು.

ಪರಂತು, 52 ವರ್ಷ ವಯಸ್ಸು ಹೊಂದಿದವರನ್ನು ಈ ರೀತಿ ನಿಯೋಜಿಸತಕ್ಕದ್ದಲ್ಲ.

(ಇ) ಸಂಬಂಧಪಟ್ಟ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಸರ್ಕಾರದ ಕಾರ್ಯದರ್ಶಿ ತಮ್ಮ ಇಲಾಖೆಯ ಅಧಿಕಾರಿಗಳನ್ನು ತಮ್ಮ ಇಲಾಖೆಯೊಳಗೆ ಸುತ್ತಿಸಬಹುದು.

(ಈ) ಆದರೂ, ಒಂದು ವೇಳೆ ಯಾವುದಾದರೂ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರು ಮೇಲಿನ ಕಂಡಿಕೆ-ಅರಲ್ಲಿ ಹೇಳಿರುವ ಕನಿಷ್ಠ ಅವಧಿಯನ್ನು ಪೂರೈಸದಿರುವ ಯಾವುದೇ ಒಬ್ಬ ಅಧಿಕಾರಿಯ ಸೇವೆಯನ್ನು ಸಿಆಸು ಇಲಾಖೆಗೆ ಹಿಂದಿರುಗಿಸಬೇಕೆಂದು ತೀರ್ಮಾನಿಸಿದಲ್ಲಿ ಅದಕ್ಕೆ ಸಕಾರಣಗಳನ್ನು ದಾಖಲಿಸಿ, ಸಿಆಸು ಇಲಾಖೆಯ ಪೂರ್ವಾನುಮತಿಯನ್ನು ಪಡೆಯಬೇಕು. ಆದರೆ ದುರ್ನಡತೆಯ ಆರೋಪವು ಯಾವುದೇ ಅಧಿಕಾರಿಯ ಸೇವೆಯನ್ನು ಸಿಆಸು ಇಲಾಖೆಗೆ ಹಿಂದಿರುಗಿಸಲು ಕಾರಣವಾಗುವುದಿಲ್ಲ. ಅಂತಹ ಪ್ರಕರಣಗಳಲ್ಲಿ ಸೂಕ್ತ ಶಿಸ್ತು ಕ್ರಮವನ್ನು ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಬೇಕು.

(ಉ) ಸಾಧ್ಯವಾದಷ್ಟು ಮಟ್ಟಿಗೆ ಕರ್ನಾಟಕ ಸರ್ಕಾರ ಸಚಿವಾಲಯದ ಸಿಬ್ಬಂದಿಯ ಚಲನವಲನವನ್ನು ಮೇಲಿನ ಕಂಡಿಕೆ-2ರಲ್ಲಿ ನಮೂದಿಸಿರುವ 4 ಪ್ರವರ್ಗಗಳಿಗೆ ಸೇರಿದ ಇಲಾಖೆಗಳಲ್ಲಿಯೇ ಮಾಡಲು ಖಾತರಿಪಡಿಸಿಕೊಳ್ಳತಕ್ಕದ್ದು.

# ಅನುಬಂಧ-2

## ವರ್ಗಾವಣೆಗಳ ವಿವರಗಳು

_________________________ಇಲಾಖೆ

ಅವಧಿ _______ ಯಿಂದ ________ ವರೆಗೆ

| ಕ್ರ ಸಂ | | 1 | 2 | 3 | 4 | 5 |
|---|---|---|---|---|---|---|
| 1 | ಇಲಾಖೆಯ ಹೆಸರು | | | | | |
| 2. | ಹುದ್ದೆಯ ಹೆಸರು | | | | | |
| 3. | ವೃಂದ ಬಲ | | | | | |
| 4. | ಅನುಮತಿಸಲಾದ ವರ್ಗಾವಣೆಗಳ ಸಂಖ್ಯೆ | | | | | |
| 5. | ಮಾಡಲಾದ ವರ್ಗಾವಣೆಗಳ ಸಂಖ್ಯೆ | | | | | |
| | i. ಸಾರ್ವಜನಿಕ ಹಿತಾಸಕ್ತಿಯಲ್ಲಿ | | | | | |
| | ii. ಕೋರಿಕೆ ಮೇರೆಗೆ | | | | | |
| | iii. ಅವಧಿಪೂರ್ವ ವರ್ಗಾವಣೆಗಳು | | | | | |
| | iv. ಅವಧಿ ಮೀರಿದ ವರ್ಗಾವಣೆಗಳು | | | | | |
| 6. | ವ್ಯತ್ಯಾಸ (4–5) | | | | | |
| 7. | ಹೆಚ್ಚಿನ ವರ್ಗಾವಣೆಗಳನ್ನು ಮಾಡಿದ್ದಲ್ಲಿ ಕಾರಣಗಳು | | | | | |
| 8. | ಸರ್ಕಾರದ ಆದೇಶದಲ್ಲಿನ ಸೂಚನೆಗಳಂತೆ ಮುಖ್ಯಮಂತ್ರಿಯವರ ಅನುಮೋದನೆ ಪಡೆಯಲಾಗಿದೆಯೇ? ಇಲ್ಲದಿದ್ದಲ್ಲಿ, ಕಾರಣಗಳನ್ನು ತಿಳಿಸುವುದು. | | | | | |
| 9 | ಇಲಾಖಾ ಮುಖ್ಯಸ್ಥರ ಷರಾ | | | | | |

ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಯವರ ಸಹಿ

**ANNEXURE to Order No. KPTCL/B5A/SA3/5474/97-98/II dated 25.04.2015**

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ


| | | |
|---|---|---|
| ಭಾಗ – I<br>Part – I | ಬೆಂಗಳೂರು, ಶುಕ್ರವಾರ, ಜೂನ್ ೧೪, ೨೦೧೩ (ಜ್ಯೇಷ್ಠ ೨೪, ಶಕ ವರ್ಷ ೧೯೩೫)<br>Bangalore, Friday, June 14, 2013 (Jyeshta 24, Shaka Varsha 1935) | ನಂ. ೬೩೮<br>No. 638 |


ಕರ್ನಾಟಕ ಸರ್ಕಾರದ ನಡವಳಿಗಳು

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ವಿಷಯ: ಸರ್ಕಾರಿ ನೌಕರರ ವರ್ಗಾವಣೆಗಳ ಬಗ್ಗೆ.

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ಬೆಂಗಳೂರು, ದಿನಾಂಕ 14.06.2013

ಸರ್ಕಾರಿ ನೌಕರರ ವರ್ಗಾವಣೆ / ನಿಯೋಜನೆಗಳನ್ನು ನಿಯಂತ್ರಿಸುವ ಬಗ್ಗೆ ದಿನಾಂಕ: 07-06-2013ರ ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 22 ಸೇನೌವ 2013ರಲ್ಲಿ ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ. ಸದರಿ ಆದೇಶದ ಕಂಡಿಕೆ 9(ಅ) ಸಾರ್ವತ್ರಿಕ ವರ್ಗಾವಣಾ ಅವಧಿಯಲ್ಲಿ ಮಾಡುವ ಸಾಮಾನ್ಯ ವರ್ಗಾವಣೆಗಳಿಗೆ ಅನ್ವಯವಾಗುವುದಿಲ್ಲವೆಂದು ಈ ಮೂಲಕ ಸ್ಪಷ್ಟೀಕರಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ದೇವರಾಜು

ಸರ್ಕಾರದ ಉಪ ಕಾರ್ಯದರ್ಶಿ

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

(ಸೇವಾ ನಿಯಮಗಳು)

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ – I<br>Part – I | ಬೆಂಗಳೂರು, ಗುರುವಾರ, ಫೆಬ್ರವರಿ ೬, ೨೦೧೪ (ಮಾಘ ೧೭, ಶಕ ವರ್ಷ ೧೯೩೫)<br>Bangalore, Thursday, February 6, 2014 (Magha 17, Shaka Varsha 1935) | ನಂ. ೮೬<br>No. 86 |


## ಕರ್ನಾಟಕ ಸರ್ಕಾರದ ನಡವಳಿಗಳು

## ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ: ಸರ್ಕಾರಿ ನೌಕರರ ವರ್ಗಾವಣೆಗಳ ಬಗ್ಗೆ.

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014, ಬೆಂಗಳೂರು, ದಿನಾಂಕ: 06.02.2014

ಸರ್ಕಾರಿ ನೌಕರರ ವರ್ಗಾವಣೆ / ನಿಯೋಜನೆಗಳನ್ನು ನಿಯಂತ್ರಿಸುವ ಬಗ್ಗೆ ದಿನಾಂಕ: 07.06.2013 ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013 ರಲ್ಲಿ ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ. ಸದರಿ ಆದೇಶದ ಕಂಡಿಕೆ 9.ಅ.vii ಕ್ಕೆ ಈ ಕೆಳಕಂಡ ಅಂಶಗಳನ್ನು ಸೇರಿಸಿ ಆದೇಶಿಸಲಾಗಿದೆ.

'ಅಂಗವಿಕಲರನ್ನು ಸಹಾನುಭೂತಿಯಿಂದ ನೋಡಬೇಕು. ಅವರಿಗೆ ವರ್ಗಾವಣೆಯ ಸಾಮಾನ್ಯ ನಿಯಮಗಳಲ್ಲಿ ರಿಯಾಯಿತಿಯನ್ನು ನೀಡಬೇಕು. ಅಲ್ಲದೆ ಅವರ ಕಾರ್ಯನಿಷ್ಠೆಯ ಬಗ್ಗೆ ಯಾವುದೇ ಆಕ್ಷೇಪಣೆ ಇಲ್ಲದಿದ್ದಲ್ಲಿ ಒಂದೇ ಸ್ಥಳದಲ್ಲಿ ನಿಗದಿತ ಅವಧಿಗಿಂತ ಹೆಚ್ಚು ಕಾಲ ಮುಂದುವರೆಸಬಹುದಾಗಿದೆ. ಹಾಗೂ ಒಂದು ವೇಳೆ ವರ್ಗಾವಣೆ ಮಾಡಲೇಬೇಕಾದುದು ಅತ್ಯವಶ್ಯವಾದಲ್ಲಿ ಅಥವಾ ಅವರಿಗೆ ಬಡ್ತಿ ಕೊಟ್ಟಾಗ ವರ್ಗಾವಣೆ ಅತ್ಯವಶ್ಯವಾದಾಗ ಅಂಗವಿಕಲರನ್ನು ಅವರ ಇಚ್ಛೆಗೆ ವಿರುದ್ಧವಾಗಿ ವರ್ಗಾಯಿಸುವ ಪ್ರಕರಣಗಳು ಅತಿ ವಿರಳವಾಗಿರಬೇಕು. ಅಂಗವಿಕಲ ನೌಕರರು ಆದ್ಯತೆ ನೀಡಿದ ಸ್ಥಳಕ್ಕೇ ವರ್ಗಾವಣೆ ಮಾಡಬೇಕು.'

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಡಾ. ಮಂಗಳ. ಜಿ.ಎಸ್.
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು–I)

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪ್ರ7) (೧೦೦ ಪ್ರತಿಗಳು)

fdRNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ– I | ಬೆಂಗಳೂರು, ಮಂಗಳವಾರ, ಏಪ್ರಿಲ್ ೨೮, ೨೦೧೫ (ವೈಶಾಖ ೦೮, ಶಕ ವರ್ಷ ೧೯೩೭) | ನಂ. ೩೬೩ |
|---|---|---|
| Part– I | Bengaluru, Tuesday, April 28, 2015 (Vaishakha 08, Shaka Varsha 1937) | No. 363 |

## ಕರ್ನಾಟಕ ಸರ್ಕಾರದ ನಡವಳಿಗಳು

### ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ವಿಷಯ: ಸರ್ಕಾರಿ ನೌಕರರ ವರ್ಗಾವಣೆಯ ಬಗ್ಗೆ ಮಾರ್ಗಸೂಚಿಗಳು

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 17 ಸೇನೌವ 2015 ಬೆಂಗಳೂರು, ದಿನಾಂಕ: 27.04.2015**

ಓದಲಾಗಿದೆ:-
1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ಬೆಂಗಳೂರು ದಿನಾಂಕ: 07.06.2013.
2. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ಬೆಂಗಳೂರು ದಿನಾಂಕ: 14.06.2013.
3. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014, ಬೆಂಗಳೂರು ದಿನಾಂಕ: 06.02.2014.
4. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 25 ಸೇನೌವ 2015, ಬೆಂಗಳೂರು ದಿನಾಂಕ: 20.04.2015

ಪ್ರಸ್ತಾವನೆ:-

ಮೇಲೆ ಓದಲಾದ ಉಲ್ಲೇಖ 1 ರಿಂದ 3 ರ ಸರ್ಕಾರದ ಆದೇಶಗಳಲ್ಲಿ ಸರ್ಕಾರಿ ನೌಕರರ ವರ್ಗಾವಣೆ ಕುರಿತಂತೆ ವಿಸ್ತೃತವಾದ ಮಾರ್ಗಸೂಚಿಗಳನ್ನು ನೀಡಲಾಗಿದೆ. ಮೇಲೆ ಓದಲಾದ ಉಲ್ಲೇಖ 4ರ ಸರ್ಕಾರದ ಆದೇಶದಲ್ಲಿ 2015–16ನೇ ಸಾಲಿನಲ್ಲಿ ಮಾಡುವ ವರ್ಗಾವಣೆಗಳ ಬಗ್ಗೆ ಮಾರ್ಗಸೂಚಿಗಳನ್ನು ನೀಡಲಾಗಿದೆ. ಭಾರತ ಸಂವಿಧಾನದ ಅನುಚ್ಛೇದ 371(ಜೆ) ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಾರ್ವಜನಿಕ ಉದ್ಯೋಗದಲ್ಲಿ ಹುದ್ದೆಗಳನ್ನು ಗುರುತಿಸಿ ಸ್ಥಳೀಯ ವೃಂದ ಹಾಗೂ ಮಿಕ್ಕುಳಿದ ವೃಂದಗಳೆಂದು ಗುರುತಿಸಲಾಗಿದೆ. ಈ ವೃಂದಗಳಿಗೆ ಸಂಬಂಧಿಸಿದಂತೆ ವರ್ಗಾವಣೆ ಮಾರ್ಗಸೂಚಿಯಲ್ಲಿ ನಿರ್ದಿಷ್ಟ ನಮೂದನ್ನು ಸೇರಿಸುವುದು ಅವಶ್ಯಕವೆಂದು ಭಾವಿಸಲಾಗಿದೆ. ಆದುದರಿಂದ, ಮೇಲೆ 1 ರಲ್ಲಿ ಓದಲಾದ ದಿನಾಂಕ: 07.06.2013 ರ ಆದೇಶದ ಕಂಡಿಕೆ 8 ಹಾಗೂ 10 ರ ನಂತರ ಈ ಕೆಳಕಂಡ ಉಪಖಂಡಗಳನ್ನು ಕ್ರಮವಾಗಿ ಸೇರಿಸಿ ಆದೇಶಿಸಲಾಗಿದೆ.

> "8 (ಅ) ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ನೆಲೆಸಿರುವ ಕಛೇರಿಗಳಿಗೆ ಸ್ಥಳೀಯ ವೃಂದ ಮತ್ತು ಮಿಕ್ಕುಳಿದ ವೃಂದಗಳಲ್ಲಿನ ವಿವಿಧ ವೃಂದದ ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆದುರಾಗಿ ನೇಮಕಾತಿ ಹೊಂದಿರುವ ನೌಕರರನ್ನು, ಅವರ ನೇಮಕಾತಿ ದಿನಾಂಕದಿಂದ ಕನಿಷ್ಠ 10 ವರ್ಷಗಳವರೆವಿಗೂ ಹೈದ್ರಾಬಾದ್-ಕರ್ನಾಟಕ ಪ್ರದೇಶ ಹೊರತುಪಡಿಸಿ ವರ್ಗಾವಣೆ ಮಾಡಬಾರದು."
>
> "10 (ಅ) ಅನುಚ್ಛೇದ 371 (ಜೆ) ಅನುಷ್ಠಾನಕ್ಕೆ ಸಂಬಂಧಿಸಿದಂತೆ ಹೊರಡಿಸಲಾದ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013 ರಂತೆ ಮಾತ್ರ ವೃಂದವನ್ನು ವಿಭಜಿಸಿ ರಚಿಸಲಾದ ಸ್ಥಳೀಯ ವೃಂದ ಹಾಗೂ ಮಿಕ್ಕುಳಿದ ವೃಂದಗಳು ನೇರ ನೇಮಕಾತಿ, ಮುಂಬಡ್ತಿ, ಜೇಷ್ಠತೆ ಹಾಗೂ ರೋಸ್ಟರ್ ಬಿಂದುಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ಘಟಕಗಳೆಂದು ಪರಿಗಣಿಸಬೇಕಾಗಿದ್ದು, ಸ್ಥಳೀಯ ವ್ಯಕ್ತಿಗಳನ್ನು ಅವರವರ ಆಯ್ಕೆಗನುಸಾರ ಸ್ಥಳೀಯ ವೃಂದ ಹಾಗೂ ಮಿಕ್ಕುಳಿದ ವೃಂದಗಳಿಗೆ ಹಂಚಿಕೆ ಮಾಡಿರುವುದರಿಂದ, ಸ್ಥಳೀಯ ವ್ಯಕ್ತಿಗಳಿಗೆ ಸಂಬಂಧಿಸಿದಂತೆ ಅವರ ವರ್ಗಾವಣೆಯನ್ನು ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ ಮಾತ್ರ ಪರಿಗಣಿಸಬೇಕಾಗುತ್ತದೆ.

ಮುಂದುವರೆದು, ಮಿಕ್ಕುಳಿದ ವೃಂದಕ್ಕೆ ಸೇರಲು ಆಯ್ಕೆ ನೀಡಿದ ಸ್ಥಳೀಯ ವ್ಯಕ್ತಿಗಳ ವರ್ಗಾವಣೆಗೆ ಸಂಬಂಧಿಸಿದಂತೆ ಮಿಕ್ಕುಳಿದ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆ ಮಾತ್ರ ಪರಿಗಣಿಸತಕ್ಕದ್ದು. ಸ್ಥಳೀಯ ವ್ಯಕ್ತಿಗಳು, ಸ್ಥಳೀಯ ವೃಂದ ಆಯ್ಕೆ ಮಾಡಿದ್ದ ಸನ್ನಿವೇಶದಲ್ಲಿ ಅವರ ಆಯ್ಕೆ ರಾಜ್ಯ ಮಟ್ಟದ ಸ್ಥಳೀಯ ವೃಂದವಾದಲ್ಲಿ ರಾಜ್ಯಮಟ್ಟದ ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ. ಅಂತೆಯೇ, ಅವರ ಆಯ್ಕೆ ಪ್ರಾದೇಶಿಕ, ಜಿಲ್ಲಾ ಅಥವಾ ತಾಲ್ಲೂಕು ಮಟ್ಟದ ಸ್ಥಳೀಯ ವೃಂದಕ್ಕೆ ಆಗಿದ್ದಲ್ಲಿ, ಅವರ ವರ್ಗಾವಣೆ ಪ್ರಾದೇಶಿಕ, ಜಿಲ್ಲಾ ಅಥವಾ ತಾಲ್ಲೂಕು ಮಟ್ಟದ ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ ಮಾತ್ರ ಪರಿಗಣಿಸತಕ್ಕದ್ದು. ನೇಮಕಾತಿ ಪ್ರಾಧಿಕಾರಗಳು ರಾಜ್ಯ, ಪ್ರಾದೇಶಿಕ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸ್ಥಳೀಯ ವೃಂದಕ್ಕೆ ಸೇರಿದ ಹುದ್ದೆಗಳನ್ನು ಒಗ್ಗೂಡಿಸಿ, ರಾಜ್ಯವ್ಯಾಪಿ ಸ್ಥಳೀಯ ವೃಂದ ರಚಿಸಿ ಅಧಿಸೂಚಿಸಿದ್ದಲ್ಲಿ, ಯಾವುದೇ ಸ್ಥಳೀಯ ವೃಂದದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ಥಳೀಯ ವ್ಯಕ್ತಿಗಳನ್ನು ವರ್ಗಾವಣೆ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯವ್ಯಾಪಿ ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ ವೃಂದ ನಿರ್ವಹಣಾ ಹಿತದೃಷ್ಟಿಯಿಂದ ಪರಿಗಣಿಸಬಹುದು."

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಡಾ. ಮಂಗಳ. ಜಿ.ಎಸ್
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿಡಿ) (200 ಪ್ರತಿಗಳು)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಸರ್ಕಾರಿ ನೌಕರರ ವರ್ಗಾವಣೆಗಳ ಬಗ್ಗೆ ಮಾರ್ಗಸೂಚಿಗಳು.

**ಓದಲಾಗಿದೆ:**

1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ದಿನಾಂಕ: 07-06-2013
2. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ದಿನಾಂಕ: 14-06-2013
3. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014, ದಿನಾಂಕ: 06-02-2014
4. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 17 ಸೇನೌವ 2015, ದಿನಾಂಕ: 27-04-2015
5. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಇವರ ಪತ್ರ ಸಂಖ್ಯೆ: ಜಿಇವಿ 5127/2015-16 ದಿನಾಂಕ: 28-09-2015

**ಪ್ರಸ್ತಾವನೆ:**

ಮೇಲೆ ಓದಲಾದ ಉಲ್ಲೇಖ (1) ರಿಂದ (4)ರವರೆಗಿನ ಸರ್ಕಾರಿ ಆದೇಶಗಳಲ್ಲಿ ಸರ್ಕಾರಿ ನೌಕರರ ವರ್ಗಾವಣೆ ಕುರಿತಂತೆ ವಿಸ್ತೃತ ಮಾರ್ಗಸೂಚಿಗಳನ್ನು ನೀಡಲಾಗಿದೆ.

ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಇವರು ಮೇಲೆ ಓದಲಾದ ಉಲ್ಲೇಖ (5)ರ ಪತ್ರದಲ್ಲಿ ಉಲ್ಲೇಖಿತ (1)ರ ಸರ್ಕಾರದ ಆದೇಶದಲ್ಲಿ ಕನ್ನಡ ಭಾಷೆಯಲ್ಲಿ "ಪದಾಧಿಕಾರಿಗಳು" ಎಂದಿದ್ದು, ಆಂಗ್ಲ ಭಾಷೆಯಲ್ಲಿ "ಚುನಾಯಿತ ಪದಾಧಿಕಾರಿಗಳು" ಎಂದು ಉಲ್ಲೇಖಿಸಿರುವುದರಿಂದ, ಅಧ್ಯಕ್ಷರಿಂದ ನಾಮನಿರ್ದೇಶಿತರಾದ ಪದಾಧಿಕಾರಿಗಳು ವರ್ಗಾವಣೆಯಿಂದ ವಿನಾಯಿತಿ ಪಡೆಯಲು ತೊಂದರೆಯಾಗುತ್ತಿದೆ ಎಂದು ತಿಳಿಸಿರುತ್ತಾರೆ ಮತ್ತು ಮಾರ್ಗಸೂಚಿಗಳಿಗೆ ಸೂಕ್ತ ತಿದ್ದುಪಡಿ ಮಾಡುವಂತೆ ಕೋರಿರುತ್ತಾರೆ. ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 63 ಸೇನೌವ 2015, ಬೆಂಗಳೂರು**
**ದಿನಾಂಕ: 01-10-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ, ಮೇಲೆ ಓದಲಾದ ಉಲ್ಲೇಖ (1)ರ ಸರ್ಕಾರಿ ಆದೇಶದ ಆಂಗ್ಲ ಭಾಷೆಯ ಭಾಗದ ಕಂಡಿಕೆ 9(ಅ)(VI)ರಲ್ಲಿ "for which he has been elected" ಪದಗಳನ್ನು ಕೈಬಿಟ್ಟು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Mangala G.S. 1/10/15
(ಡಾ.ಮಂಗಳ ಜಿ.ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
(ಸೇವಾ ನಿಯಮಗಳು-1)

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ - ಇದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ

## ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ: ಸರ್ಕಾರಿ ನೌಕರರ ವರ್ಗಾವಣೆಗಳ ಬಗ್ಗೆ ಮಾರ್ಗಸೂಚಿಗಳು

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ದಿನಾಂಕ: 07.06.2013.
2. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ದಿನಾಂಕ: 14.06.2013.
3. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014, ದಿನಾಂಕ: 06.02.2014.
4. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 17 ಸೇನೌವ 2015, ದಿನಾಂಕ: 27.04.2015.

ಪ್ರಸ್ತಾವನೆ:

ಮೇಲೆ ಓದಲಾದ ಉಲ್ಲೇಖ (1)ರಿಂದ (4)ರವರೆಗಿನ ಸರ್ಕಾರಿ ಆದೇಶಗಳಲ್ಲಿ ಸರ್ಕಾರಿ ನೌಕರರ ವರ್ಗಾವಣೆ ಕುರಿತಂತೆ ವಿಸ್ತೃತ ಮಾರ್ಗಸೂಚಿಗಳನ್ನು ನೀಡಲಾಗಿದೆ. ರಾಜ್ಯ ಸಿವಿಲ್ ಸೇವೆಗಳ ಗುಂಪು 'ಎ' ಮತ್ತು 'ಬಿ' ಹುದ್ದೆಗಳಿಗೆ ದಿನಾಂಕ: 07.06.2013 ರ ಆದೇಶದಲ್ಲಿ 3 ವರ್ಷಗಳನ್ನು ವರ್ಗಾವಣೆಗಾಗಿ ಕನಿಷ್ಠ ಸೇವಾವಧಿಯೆಂದು ನಿಗದಿಪಡಿಸಲಾಗಿದೆ. ಸರ್ಕಾರವು ಈ ಅಂಶವನ್ನು ಮರುಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 25 ಸೇನೌವ 2015, ಬೆಂಗಳೂರು, ದಿನಾಂಕ: 14.10.2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಮೇಲೆ ಓದಲಾದ ಉಲ್ಲೇಖ (1)ರ ಸರ್ಕಾರಿ ಆದೇಶದ ಕಂಡಿಕೆ 8ರಲ್ಲಿ ವರ್ಗಾವಣೆಗಾಗಿ ನಿಗದಿಪಡಿಸಲಾಗಿರುವ ಕನಿಷ್ಠ ಅವಧಿಯನ್ನು ಭಾಗಶಃ ಮಾರ್ಪಡಿಸಿ ಗುಂಪು 'ಎ' ಮತ್ತು 'ಬಿ' ಹುದ್ದೆಗಳಿಗೆ ವರ್ಗಾವಣೆ ಮಾಡಲು 2 ವರ್ಷಗಳನ್ನು ಕನಿಷ್ಠ ಸೇವಾವಧಿ ಎಂದು ನಿಗದಿಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಡಾ. ಮಂಗಳ ಜಿ.ಎಸ್.

ಸರ್ಕಾರದ ಅಧೀನ ಕಾರ್ಯದರ್ಶಿ

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾ ನಿಯಮಗಳು-1)

PR. 86

SC. 200

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ



| | | |
|---|---|---|
| ಭಾಗ-III | ಬೆಂಗಳೂರು, ಸೋಮವಾರ, ಮಾರ್ಚ್ ೨೭, ೨೦೧೭ (ಚೈತ್ರ ೦೬, ಶಕ ವರ್ಷ ೧೯೩೮) | ನಂ. ೩೦೪ |
| Part-III | Bengaluru, Monday, March 27, 2017 (Chaitra 06, Shaka Varsha 1938) | No. 304 |



**PERSONNEL AND ADMINISTRATIVE REFORMS SECRETARIAT**

**CIRCULAR**

**No: DPAR 2 STR 2017, Bengaluru, Dated: 27.03.2017**

**Sub:** Implementation of the directions of the Hon'ble High Court regarding transfer of Government Servants.

**Ref:** (1) Government Order No. DPAR 22 STR 2013, dated:07.06.2013.
(2) Circular No. DPAR 2 STR 2017, dated: 18.01.2017.

Guidelines regarding transfer of Government Servants has been issued by the Government in Government order No. DPAR 22 STR 2013 dated: 07.06.2013. In Para 5 of the transfer order it is stated that transfers/deputation should be done in such a way that no Government Servant should remain on compulsory waiting. These instructions were reiterated in circular dated: 18.01.2017 cited under reference.

Considering the continued violation of the transfer guidelines it has become necessary to issue a circular containing instructions to ensure that no Government Servant is kept waiting for posting when transfer orders are issued in the interest of administration. Hence, the following instructions are issued.

1. When a Government Servant is transferred to a particular post, the Government Servant who is displaced shall be shown a posting without fail. Transfer should be done in such a way that no Government Servant should remain on compulsory waiting.
2. Further, the competent authority shall record reasons in writing for not showing posting to any Government Servant for compelling administrative reasons like non availability of post due to abolishment/up-gradation/down-gradation, shifting in lieu of suspension, requirement of Government Servant to perform urgent confidential work in a post, unsuitability or inefficiency to work in the existing vacancy or for being utilized against temporary and leave vacancy etc which are only illustrative but not exhaustive.
3. In a case when transfer has been effected and the Government Servant being displaced is not shown posting recording reasons in writing, he shall report to the Head of the Department and carry out functions assigned to him and on review such officer would be posted to such other offices as may be found suitable. Such reporting of Government Servants to the Head of the Department shall not be treated as a transfer for the purpose of considering further transfer as premature.

No order shall be issued in violation of the above said guidelines. Any violation shall be viewed seriously and the person responsible will be made accountable.

**FAIROZA KHANAM**
Special Secretary to Government
Department of Personnel and
Administrative Reforms, (Service Rules)

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು (೬೭) ಪ್ರತಿಗಳು: 1000

**PROCEEDINGS OF THE GOVERNMENT OF KARNATAKA**

Sub: Transfer of Government Servants – regarding.

**Government Order No. DPAR 2 STR 2017 Bengaluru, dated:27.03.2017**

---

Guidelines have been issued to regulate transfer/deputations of Government Servants in Government Order No. DPAR 22 STR 2013, dated: 07.06.2013. It is hereby ordered that the following proviso shall be added in Para 5 of the said order.

> "Provided that in a case when transfer has been effected and the Government Servant being displaced is not shown posting recording reasons in writing, he shall report to the Head of the Department and carry out functions assigned to him and on review such officer would be posted to such other offices as may be found suitable. Such reporting of Government Servants to the Head of the Department shall not be treated as a transfer for the purpose of considering further transfer as premature."

By Order and in the name of the
Governor of Karnataka

(FAIROZA KHANAM)
Special Secretary to Government
Department of Personnel and
Administrative Reforms,
(Service Rules)

To:
The Compiler, Karnataka Gazette for publication in the special issue of the Official Gazette and to supply 1000 copies to the Under

2...

Secretary, Department of personnel and administrative Reforms, Service Rules-1, Room No. 31, Vidhana Soudha, Bengaluru.

**Copy to:**

1. The Principal Accountant General (G&SSA)/(E&RSA)/(A&E), Bengaluru
2. The Chief Secretary to Government
3. The Additional Chief Secretary to Government
4. The Additional Chief Secretary and Development Commissioner
5. All Additional Chief Secretaries/Principal Secretaries/Secretaries to Government
6. The Additional Chief Secretary to Chief Minister
7. The Special Secretary to Governor
8. All Heads of Departments
9. All Regional Commissioners
10. All Deputy Commissioners of Districts/Chief Executive Officers of Zilla Panchayats
11. *The Secretary, Karnataka Legislative Assembly / Council
12. *The Registrar General, High Court of Karnataka, Bengaluru
13. *The Registrar, Karnataka State Administrative Tribunal, 6th & 7th Floor, Kandaya Bhavan, K.G.Road, Bengaluru – 560009
14. *The Registrar, Karnataka Lokayukta, Bengaluru
15. *The Registrar, Karnataka Appellate Tribunal, M.S. Building, Bengaluru
16. *The Secretary, Karnataka Public Service Commission, Bengaluru
17. Private Secretary to All Ministers/State Ministers
18. The Resident Commissioner, Karnataka Bhavan, Kautilya Marg, Chanakyapuri, New Delhi – 110 011
19. All Special/Additional/Joint/Deputy/Under Secretaries to Government
20. All Sections of Karnataka Government Secretariat
21. President, Karnataka State Government Employees Association, Cubbon Park, Bengaluru
22. Weekly Gazette
23. Section Guard File /Spare copies

(* with Covering Letter)

**GOVERNMENT OF KARNATAKA**

No. DPAR 4 STR 2018

Karnataka Government Secretariat,
Vidhana Soudha,
Bangalore, dated: 27.01.2018.

**CIRCULAR**

**Sub:** Implementation of the directions of the Hon'ble High Court regarding premature transfers of Government Servants.
**Ref:** Government Order No. DPAR 22 STR 2013 dated: 07.06.2013.

***

Guidelines regarding transfer of Government Servants have been issued by the Government in Government order No. DPAR 22 STR 2013 dated: 07.06.2013.

Para 9 of the aforesaid Government Order dated: 07.06.2013 emphasizes the various conditions that have to be adhered to before issuing premature/delayed transfers.

Para 9a envisages that the minimum period of stay at a place as prescribed in Para 8 of the above order can be reduced and the concerned Government servant transferred prematurely if the competent authority feels that he/she is not suitable for discharging the duties at the present place and the reasons are recorded to this effect in writing.

Para 9b categorically states that before effecting any premature transfer of Government servants for the reasons stated in Para 9a, prior approval of the Hon'ble Chief Minister must be obtained without fail by the concerned Administrative Department of the Secretariat **if the transfers are to be made beyond the general transfer period**. The Principal Secretaries/Secretaries to Government should not under any circumstances issue transfer orders and later seek ratification/post facto approval of the Chief Minister.

Considering the continued violation of the transfer guidelines, it has become necessary to issue strict instructions to ensure that

(a) no Government Servant is transferred prematurely in contravention of the transfer guidelines.

(b) no order shall be issued in violation of the above said guidelines.

Any violation shall be viewed seriously and the person responsible will be made accountable.

Gayathri M.R. 27/12/2018

(GAYATHRI.M.R.)
Under Secretary to Government,
Department of Personnel and Administrative Reforms
(Service Rules-1).

*To:*
The Compiler, Karnataka Gazette for publication in the special issue of the Official Gazette and to supply 1000 copies to the Under

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 18 ಸೇನೌವ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 07.11.2018

## ಸುತ್ತೋಲೆ

ವಿಷಯ: ಕಡ್ಡಾಯ ಕಾಯುವ ಅವಧಿಯನ್ನು ಮಂಜೂರು ಮಾಡಲು ಆಸ್ಪದವಾಗದಂತೆ ವರ್ಗಾವಣೆಗೊಂಡ ಸ್ಥಳದಲ್ಲಿದ್ದ ಅಧಿಕಾರಿ/ ನೌಕರರಿಗೂ ಸೂಕ್ತ ಸ್ಥಳವನ್ನು ತೋರಿಸಿ ವರ್ಗಾಯಿಸಲು ಮುಂದುವರಿದ ಸೂಚನೆಗಳು

ಉಲ್ಲೇಖ: 1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2018 ದಿನಾಂಕ: 23.06.2018 ಮತ್ತು 31.07.2018

2. ಸುತ್ತೋಲೆ ಸಂಖ್ಯೆ: ಸಿಆಸುಇ 18 ಸೇನೌವ 2018 ದಿನಾಂಕ 02.08.2018

*~*~*~*

1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013 ದಿನಾಂಕ 07.06.2013 ರಲ್ಲಿ ಸರ್ಕಾರಿ ನೌಕರರ ವರ್ಗಾವಣೆಗಳ ಬಗ್ಗೆ ವಿಸ್ತೃತ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ ಮತ್ತು ಸದರಿ ಆದೇಶಕ್ಕೆ ಕಾಲಕಾಲಕ್ಕೆ ಕೆಲವು ತಿದ್ದುಪಡಿಗಳನ್ನು ಮಾಡಲಾಗಿದೆ. 2018-19ನೇ ಸಾಲಿನ ಸರ್ಕಾರಿ ನೌಕರರ ವರ್ಗಾವಣೆಗಳನ್ನು ಸದರಿ ಆದೇಶಗಳಲ್ಲಿನ ಷರತ್ತುಗಳಿಗೊಳಪಟ್ಟು ಸಂಬಂಧಿತ ವೃಂದದ ಕಾರ್ಯನಿರತ ವೃಂದಬಲದ (working strength) ಗರಿಷ್ಠ ನಾಲ್ಕರಷ್ಟಕ್ಕೆ (4%) ಸೀಮಿತಗೊಳಿಸಿ ದಿನಾಂಕ 10.08.2018 ರೊಳಗೆ ಪೂರ್ಣಗೊಳಿಸತಕ್ಕದ್ದೆಂದು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2018 ದಿನಾಂಕ 31.07.2018 ರಲ್ಲಿ ತಿಳಿಸಿದೆ. 2018-19ನೇ ಸಾಲಿನ ಸಾರ್ವತ್ರಿಕ ವರ್ಗಾವಣೆ ಅವಧಿ ಮುಗಿದ ನಂತರ ಮತ್ತು ಅವಧಿಪೂರ್ವ ವರ್ಗಾವಣೆಗಳನ್ನು ಮಾಡಬೇಕಾದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳ ಅನುಮೋದನೆ/ಆದೇಶ ಪಡೆದು ವರ್ಗಾಯಿಸುವುದು ಕಡ್ಡಾಯವಾಗಿರುತ್ತದೆ. ಸರ್ಕಾರಿ ನೌಕರರ ವರ್ಗಾವಣೆ/ನಿಯೋಜನೆಗಳನ್ನು ಮಾಡುವಾಗ ಯಾವುದೇ ಸರ್ಕಾರಿ ನೌಕರನು ಕಡ್ಡಾಯ ನಿರೀಕ್ಷಣೆಯಲ್ಲಿ ಉಳಿಯುವಂತಹ ಸಂದರ್ಭಗಳು ಉಂಟಾಗದಂತೆ ನೋಡಿಕೊಳ್ಳತಕ್ಕದ್ದೆಂದು ದಿನಾಂಕ 07.06.2013 ರ ಮಾರ್ಗಸೂಚಿಗಳಲ್ಲಿ ಸ್ಪಷ್ಟವಾಗಿ ಸೂಚಿಸಲಾಗಿದೆ.

2. ಹೀಗಿದ್ದರೂ ಸಹ ಕೆಲವು ಇಲಾಖೆಗಳಲ್ಲಿ ವರ್ಗಾವಣೆ ಮಾಡುವಾಗ ಕೆಲವು ಅಧಿಕಾರಿ/ ನೌಕರರಿಗೆ ಸ್ಥಳನಿಯುಕ್ತಿಗೊಳಿಸದೇ ಇರುವುದರಿಂದ ಅಂತಹ ವರ್ಗಾವಣೆಗಳಿಗೆ ಮಾನ್ಯ ನ್ಯಾಯಾಲಯಗಳು ತಡೆಯಾಜ್ಞೆ ನೀಡುತ್ತಿವೆ. ಇದಲ್ಲದೆ ಅಂತಹ ಅಧಿಕಾರಿ/ನೌಕರರಿಗೆ ಕಡ್ಡಾಯ ಕಾಯುವ ಅವಧಿಯನ್ನು ಮಂಜೂರು ಮಾಡುವ ಸಂದರ್ಭ ಉಂಟಾಗುತ್ತದೆ. ಇದರಿಂದ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗುತ್ತದೆ.

3. ಹೀಗಾಗದಂತೆ ಎಲ್ಲಾ ಸಕ್ಷಮ ಪ್ರಾಧಿಕಾರಗಳು ಕಡ್ಡಾಯ ಕಾಯುವ ಅವಧಿ ಮಂಜೂರು ಮಾಡಬೇಕಾದ ಪರಿಸ್ಥಿತಿ ಉಂಟಾಗದಂತೆ ವರ್ಗಾವಣೆ ಆದೇಶಗಳನ್ನು ಸೂಕ್ತವಾಗಿ ತಯಾರಿಸಿ ಸನ್ಮಾನ್ಯ ಮುಖ್ಯ ಮಂತ್ರಿಗಳ ಪೂರ್ವಾನುಮೋದನೆ ಪಡೆದು ಹೊರಡಿಸಲು ಸೂಚಿಸಿದೆ.

4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಯವರು ತಮ್ಮ ಆಡಳಿತ ವ್ಯಾಪ್ತಿಯಡಿಯಲ್ಲಿ ಬರುವ ಸಂಬಂಧಿಸಿದ ಎಲ್ಲಾ ಸಕ್ಷಮ ಪ್ರಾಧಿಕಾರಗಳು, ಮೇಲ್ಕಂಡ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಲು ಅಗತ್ಯವಾದ ಕ್ರಮಗಳನ್ನು ಕೈಗೊಳ್ಳಬೇಕೆಂದು ಸೂಚಿಸಿದೆ.

(ತ.ಮ.ವಿಜಯಭಾಸ್ಕರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ.

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ - ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸೇವಾ ನಿಯಮಗಳು-1, ಕೊಠಡಿ ಸಂಖ್ಯೆ: 31, ವಿಧಾನ ಸೌಧ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)/(ಇ&ಆರ್ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು.
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
12. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
14. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
17. ಎಲ್ಲಾ ಸಚಿವರ /ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು
18. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110 011.
19. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
20. ಸಚಿವಾಲಯದ ಎಲ್ಲಾ ಶಾಖೆಗಳು.
21. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
22. ವಾರದ ರಾಜ್ಯಪತ್ರ.
23. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(*ಮುಖಪತ್ರದೊಂದಿಗೆ)

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 18 ಸೇನೌವ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ
ಬೆಂಗಳೂರು, ದಿನಾಂಕ: 11.12.2018

**ಸೇರ್ಪಡೆ(Addendum)**

ವಿಷಯ: ಸರ್ಕಾರಿ ನೌಕರರ ವರ್ಗಾವಣೆಗೆ ಸಂಬಂಧಿಸಿದಂತೆ ಹೆಚ್ಚುವರಿ ಮಾರ್ಗಸೂಚಿಗಳು.

****

ಸರ್ಕಾರಿ ನೌಕರರ ವರ್ಗಾವಣೆಗೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಹೊರಡಿಸಲಾದ ದಿನಾಂಕ:07.06.2013ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013ರ ಕಂಡಿಕೆ 6(ಅ) ನಂತರ ಈ ಕೆಳಕಂಡ ಅಂಶಗಳನ್ನು ಸೇರ್ಪಡಿಸಲಾಗಿದೆ:

"(ಇ) ವರ್ಗಾವಣೆಗೊಂಡ ಸರ್ಕಾರಿ ನೌಕರರು ವರ್ಗಾವಣೆ ಆದೇಶದ ಪ್ರಕಾರ ಅವರಿಗೆ ವರ್ಗಾಯಿಸಲಾದ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾಗದೆ, ವೈದ್ಯಕೀಯ ಕಾರಣಗಳನ್ನು ನೀಡಿ ರಜೆ ಅರ್ಜಿಗಳನ್ನು ಸಲ್ಲಿಸುವ ಪ್ರಕರಣಗಳಲ್ಲಿ, ವರ್ಗಾವಣೆಗೊಂಡ ಅಂತಹ ಸರ್ಕಾರಿ ನೌಕರರು, ವರ್ಗಾವಣೆ ಆದೇಶವನ್ನು ಹೊರಡಿಸಿದ ಪೂರ್ವದಲ್ಲಿ ಅಥವಾ ಸೇರುವಿಕೆ ಕಾಲದಲ್ಲಿ ಆಸ್ಪತ್ರೆಯಲ್ಲಿ ಒಳರೋಗಿಯಾಗಿ(**as in-patient**) ಚಿಕಿತ್ಸೆಯನ್ನು ಪಡೆಯುವ ಸಂದರ್ಭದಲ್ಲಿ ಮಾತ್ರ, ಅಗತ್ಯ ದಾಖಲೆಗಳೊಂದಿಗೆ ಹಾಗೂ ವೈದ್ಯಕೀಯ ಮಂಡಳಿಯ ದೃಢೀಕರಣ ಪತ್ರದೊಂದಿಗೆ ರಜೆಯನ್ನು ಕೋರಿ ಅರ್ಜಿಯನ್ನು ಸಲ್ಲಿಸಿದಲ್ಲಿ, ವೈದ್ಯಕೀಯ ಕಾರಣಗಳ ಮೇಲೆ ರಜೆಯನ್ನು ಮಂಜೂರು ಮಾಡುವ ಬಗ್ಗೆ ಸಕ್ಷಮ ಪ್ರಾಧಿಕಾರ ಪರಿಶೀಲಿಸಿ ರಜೆಯನ್ನು ಮಂಜೂರು ಮಾಡುವ ಬಗ್ಗೆ ನಿರ್ಣಯಿಸಬಹುದಾಗಿದೆ.

(ಈ) ಒಳರೋಗಿಯಾಗಿದ್ದವರು ಆಸ್ಪತ್ರೆಯಿಂದ ಬಿಡುಗಡೆಯಾಗಿ, ತದನಂತರ ಹೊರರೋಗಿಯಾಗಿ ಚಿಕಿತ್ಸೆ ಪಡೆಯುತ್ತಿದ್ದರೆ ಅಥವಾ ವೈದ್ಯಕೀಯ ಸಲಹೆ ಮೇರೆಗೆ ಚಿಕಿತ್ಸೆ/ ವಿಶ್ರಾಂತಿ ಪಡೆಯುತ್ತಿದ್ದರೆ, ಅವರು ವರ್ಗಾವಣೆಗೊಂಡ ಸ್ಥಳದಲ್ಲಿ ಸೇರಿಕೆ ಕಾಲದೊಳಗೆ ಕರ್ತವ್ಯಕ್ಕೆ ಹಾಜರಾಗಿ, ರಜಾ ಅರ್ಜಿಯನ್ನು ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸಿ, ರಜೆ ಮಂಜೂರು ಮಾಡಿದ ನಂತರವೇ ರಜೆ ಮೇಲೆ ತೆರಳಬಹುದು. ಇಲ್ಲದಿದ್ದಲ್ಲಿ ಸೇರಿಕೆ ಕಾಲ ಮೀರಿದ ಅವಧಿಯನ್ನು ಅನಧಿಕೃತ ಗೈರು ಹಾಜರಿ ಎಂದು ಪರಿಗಣಿಸತಕ್ಕದ್ದು.

(ಉ) ಸಂಬಂಧಿಸಿದ ಸರ್ಕಾರಿ ನೌಕರರು ಒಳರೋಗಿಯಾಗಿ ಚಿಕಿತ್ಸೆ ಪಡೆಯುವ ಸಂದರ್ಭದಲ್ಲಿ ವೈದ್ಯಕೀಯ ಕಾರಣಗಳ ಮೇಲೆ ರಜಾ ಅರ್ಜಿಯನ್ನು ಕಡ್ಡಾಯವಾಗಿ

ನಿಗದಿತ ಸೇರಿಕೆ ಕಾಲದೊಳಗೆ(**within the joining time prescribed**) ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು. ಇಲ್ಲದಿದ್ದಲ್ಲಿ ಸೇರಿಕೆ ಕಾಲ ಮೀರಿದ ಅವಧಿಯನ್ನು ಅನಧಿಕೃತ ಗೈರುಹಾಜರಿ ಎಂದು ಪರಿಗಣಿಸತಕ್ಕದ್ದು."

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Gayathri M.R 1/1/2018

(ಗಾಯತ್ರಿ ಎಂ.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

**ಇವರಿಗೆ,**
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ - ಇದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸೇವಾ ನಿಯಮಗಳು-1, ಕೊಠಡಿ ಸಂಖ್ಯೆ: 31, ವಿಧಾನ ಸೌಧ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.

**ಪ್ರತಿ:**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)/(ಇ&ಆರ್ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
12. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
14. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
17. ಎಲ್ಲಾ ಸಚಿವರ /ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು
18. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿ-110 011.
19. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
20. ಸಚಿವಾಲಯದ ಎಲ್ಲಾ ಶಾಖೆಗಳು.
21. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
22. ವಾರದ ರಾಜ್ಯಪತ್ರ.
23. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

**(*ಮುಖಪತ್ರದೊಂದಿಗೆ)**

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳಿಗೆ ವರ್ಗಾವಣೆಯಿಂದ ವಿನಾಯಿತಿ ನೀಡುವ ಬಗ್ಗೆ ಸೂಚನೆಗಳು.

**ಓದಲಾಗಿದೆ:**

1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013 ದಿನಾಂಕ: 07-06-2013
2. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013 ದಿನಾಂಕ: 14-06-2013
3. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 18 ಸೇನೌವ 2014 ದಿನಾಂಕ: 06-02-2014
4. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 17 ಸೇನೌವ 2015 ದಿನಾಂಕ: 27-04-2015
5. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 25 ಸೇನೌವ 2015 ದಿನಾಂಕ: 14-10-2015
6. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 2 ಸೇನೌವ 2017 ದಿನಾಂಕ: 27-03-2017
7. ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯು ಅರ್ಜಿ ಸಂಖ್ಯೆ: 4306/2017ರಲ್ಲಿ ದಿನಾಂಕ: 27-07-2017ರಂದು ನೀಡಿದ ಆದೇಶ.

**ಪ್ರಸ್ತಾವನೆ:**

1) ಮೇಲೆ ಓದಲಾದ ಉಲ್ಲೇಖಿ (1) ರಿಂದ (6)ರವರೆಗಿನ ಸರ್ಕಾರಿ ಆದೇಶಗಳಲ್ಲಿ ಸರ್ಕಾರಿ ನೌಕರರ ವರ್ಗಾವಣೆ ಕುರಿತಂತೆ ವಿಸ್ತೃತ ಮಾರ್ಗಸೂಚಿಗಳನ್ನು ನೀಡಲಾಗಿದೆ. ಮೇಲೆ (1)ರಲ್ಲಿ ಓದಲಾದ ಆದೇಶದ ಕಂಡಿಕೆ **9.ಅ.vi** ರಲ್ಲಿ ಈ ಕೆಳಕಂಡಂತೆ ನಿರ್ದಿಷ್ಟಪಡಿಸಲಾಗಿದೆ:

> *"ಒಂದು ವೇಳೆ ಸರ್ಕಾರಿ ನೌಕರನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಯಾಗಿದ್ದಲ್ಲಿ ಮಾತ್ರ ಅಂತಹ ನೌಕರನನ್ನು ಆ ಪದಾಧಿಕಾರದ ಅವಧಿ ಮುಗಿಯುವವರೆಗೆ ವರ್ಗಾಯಿಸಬಾರದು. ಒಂದು ವೇಳೆ ಪದಾಧಿಕಾರದ ಅವಧಿ ಮುಗಿದ ನಂತರ 3 ತಿಂಗಳು ಚುನಾವಣೆಗಳು ನಡೆಯದಿದ್ದಲ್ಲಿ ಅಂತಹವರನ್ನು ವರ್ಗಾಯಿಸಬಹುದು. ಒಂದು ವೇಳೆ ಅವನು ಮರುಚುನಾಯಿತನಾದಲ್ಲಿ, ಎರಡನೇ ಅವಧಿಯವರೆಗೆ ಮಾತ್ರ ಅತನನ್ನು ಮುಂದುವರಿಸಬಹುದು."*

2) ಸರ್ಕಾರಿ ನೌಕರರು ವರ್ಗಾವಣೆಯನ್ನು ತಪ್ಪಿಸಿಕೊಳ್ಳಲು ಸಂಘದ ಪದಾಧಿಕಾರದ ಅಧಿಕಾರಾವಧಿ ಪೂರ್ಣಗೊಳ್ಳುವ ಸಮಯಕ್ಕೆ ಸರಿಯಾಗಿ ಸಂಘದ ಚುನಾವಣೆಯಲ್ಲಿ ಮತ್ತೊಮ್ಮೆ ಸ್ಪರ್ಧಿಸಿ, ಪುನಃ 5 ವರ್ಷಗಳ ಕಾಲ ವರ್ಗಾವಣೆಯಿಂದ ವಿನಾಯಿತಿ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇತ್ತೀಚೆಗೆ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳ ವರ್ಗಾವಣೆಗೆ ಸಂಬಂಧಿಸಿದಂತೆ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ:4306/2017 ದಾಖಲಾಗಿದ್ದು, ಮಾನ್ಯ ನ್ಯಾಯ ಮಂಡಳಿಯು ಯಾವುದೇ ಸರ್ಕಾರಿ ನೌಕರನ ವರ್ಗಾವಣೆ ಜಾರಿಗೆ ಬರುವ ಮುನ್ನ ವರ್ಗಾವಣೆ ಪ್ರಾಧಿಕಾರವು ವರ್ಗಾವಣೆಗೊಳಪಟ್ಟ ನೌಕರನು ನೌಕರರ ಸಂಘದ ಪದಾಧಿಕಾರಿಯಾಗಿದ್ದಲ್ಲಿ ಅಂತಹ ನೌಕರನು ವರ್ಗಾವಣೆಯನ್ನು ನಿರ್ದಿಷ್ಟ ಪಡಿಸಿದ ಅವಧಿಗೆ ಮುಂದೂಡುವ ಅಗತ್ಯವಿರುವ ಬಗ್ಗೆ ಪರಿಶೀಲಿಸತಕ್ಕದೆಂದು ಸೂಚಿಸಿ ದಿನಾಂಕ: 27.07.2017ರ ತೀರ್ಪಿನಲ್ಲಿ ಈ ಕೆಳಕಂಡಂತೆ ನಿರ್ದೇಶನ ನೀಡಿರುತ್ತದೆ.

> *"Before parting with this case, I would like to emphasize on the Government that this Tribunal is coming across many cases relating to transfer of office bearers where they seek exemption from transfer on the ground that they are Office Bearers of Association. Before effecting transfer of a Government servant the transferring Authority is required to verify whether he is an office bearer and his transfer has to be deferred, so long as such an*

*exemption is available in statute look. In many cases Government servants contest elections when they are just to complete their tenure as Government servant and if they are elected they seek exemption for another term of five years. Such a provision in the Transfer Guidelines has to be reviewed in the interest of public service and suitable amendment requires to be made to the aforesaid provision of transfer guidelines with a view to avoid its misuse.*

*Registry is directed to send a copy of this order to the Chief Secretary to Government for necessary action"*

3) ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ಮೇಲ್ಕಂಡ ಆದೇಶದಲ್ಲಿನ ಅಂಶಗಳನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 51 ಸೇನೌವ 2017, ಬೆಂಗಳೂರು**
**ದಿನಾಂಕ:31.05.2019**

4) ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮೇಲೆ (1)ರಲ್ಲಿ ಓದಲಾದ ದಿನಾಂಕ:07.06.2013ರ ಸರ್ಕಾರಿ ಆದೇಶದ ಕಂಡಿಕೆ **9.ಅ.vi**ರ ಬದಲಾಗಿ ಈ ಕೆಳಕಂಡಂತೆ ಪ್ರತಿಸ್ಥಾಪಿಸಲಾಗಿದೆ.

*"ಒಂದು ವೇಳೆ ಸರ್ಕಾರಿ ನೌಕರನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಯಾಗಿದ್ದಲ್ಲಿ, ಪದಾಧಿಕಾರದ ಒಂದು ಅವಧಿಗೆ ಮಾತ್ರ ಅವರಿಗೆ ವರ್ಗಾವಣೆಯಿಂದ ವಿನಾಯಿತಿ ನೀಡಿ, ಎರಡನೇ ಅವಧಿಗೆ ಅವರು ಮರುಚುನಾಯಿತರಾದಲ್ಲಿ ಅವರನ್ನು ನಿಯಮಾನುಸಾರ ವರ್ಗಾವಣೆ ಮಾಡತಕ್ಕದ್ದು".*

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Gayathri M.R
31.05.2019

(ಗಾಯತ್ರಿ ಎಂ.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
(ಸೇವಾ ನಿಯಮಗಳು-।)

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ – ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸೇವಾ ನಿಯಮಗಳು-I, ಕೊಠಡಿ ಸಂಖ್ಯೆ: 31, ವಿಧಾನ ಸೌಧ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.

5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
12. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
14. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
17. ಎಲ್ಲಾ ಸಚಿವರ /ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು
18. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿ-110 011.
19. ಸಚಿವಾಲಯದ ಎಲ್ಲಾ ಶಾಖೆಗಳು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
21. ವಾರದ ರಾಜ್ಯಪತ್ರ.
22. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(*ಮುಖಪತ್ರದೊಂದಿಗೆ)